# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 148 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 30–12–2024 ಸೋಮವಾರ | ಪುಟ: 4 | ಬೆಲೆ : ರೂ.2–00

Volume - 02 Issue - 148 | RNI No: KARKAN/2023/88462 | KA/SK/CTA-874/2024-2026 | Chitradurga | Date: 30-12-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮನಮೋಹನ್‌ಸಿಂಗ್ ಭಾವಚಿತ್ರಕ್ಕೆ ವೇದಾವತಿ ನೀರಿನಿಂದ ಜಲಾಭಿಷೇಕ 2

ಬೇಡಿಕೆ ಈಡೇರಿಕೆ ಆಗ್ರಹಿಸಿ ಸಾರಿಗೆ ನೌಕರರ ಪ್ರತಿಭಟನೆ 3

ರೆಡ್ಡಿ ಜನಸಂಘದಿಂದ ವಸತಿ ಶಾಲೆ ನಿರ್ಮಾಣ: ಶಾಸಕ ತಿಪ್ಪಾರೆಡ್ಡಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಈಜಲು ಹೋದ ಪಿಯು ವಿದ್ಯಾರ್ಥಿ ಶಿವಕುಮಾರ್ ನೀರಿನಲ್ಲಿ ಮುಳುಗಿ ಸಾವು



» **ಚಳ್ಳಕೆರೆ**

ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ಹೊಸಹಳ್ಳಿ ಗ್ರಾಮದ ಕೆರೆಯಲ್ಲಿ ಈಜಲು ಹೋದ ಯುವಕ ಶಿವಕುಮಾರ್(20) ಆಕಸ್ಮಿಕವಾಗಿ ನೀರಿನಲ್ಲಿ ಮುಳುಗಿ ಮೃತಪಟ್ಟಿರುತ್ತಾನೆ. ಶನಿವಾರ ಮಧ್ಯಾಹ್ನ ಸುಮಾರು ಒಂದರ ಸಮಯದಲ್ಲಿ ಸ್ನೇಹಿತರೊಂದಿಗೆ ಗ್ರಾಮದ ಕೆರೆಯಲ್ಲಿ ಈಜಾಡಲು ಹೋಗಿದ್ದಾನೆ. ಬಹಳ ಹೊತ್ತಾದರೂ ಬಾರದ ಹಿನ್ನೆಲೆಯಲ್ಲಿ ಗಾಬರಿಗೊಂಡ ಸ್ನೇಹಿತರು ಪೋಷಕರು, ಪೊಲೀಸ್ ಮತ್ತು ಅಗ್ನಿಶಾಮಕ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಅವರು ಕೆರೆಯಲ್ಲಿ ಹುಡುಕಾಡಿದ ನಂತರ ಸಂಜೆ 6.30ರ ವೇಳೆಗೆ ಮೃತದೇಹ ಪತ್ತೆಯಾಗಿದ್ದು, ಇಲ್ಲಿನ ಸಾರ್ವಜನಿಕ ಆಸ್ಪತ್ರೆಯ ಶವಗಾರದಲ್ಲಿ ಇಡಲಾಗಿದೆ. ತಳಕು ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ. ಅಗ್ನಿಶಾಮಕ ಪಡೆಯ ಠಾಣಾಧಿಕಾರಿ ಮುಸ್ತಾಕೀಮ್ ಆಹಮ್ಮದ್, ಸಿಬ್ಬಂದಿಯಾದ ತಿಪ್ಪೇಶ್, ನಾಗರಾಜು, ಗುರು, ಅರವಿಂದ ಖಂಡೋಜಿ, ಬಸವಗೌಡ ಕಾರ್ಯಚರಣೆ ನಡೆಸಿದರು.

### ವಿದ್ಯುತ್ ಶಾಕ್‌ನಿಂದ ಮಹಿಳೆ ಸಾವು

» **ಚಳ್ಳಕೆರೆ**

ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ತಿಮ್ಮಪ್ಪಯ್ಯನಹಳ್ಳಿ ಗ್ರಾಮದ ನಾಗರತ್ನಮ್ಮ(34) ಮನೆಯಲ್ಲೇವಿದ್ಯುತ್‌ಶಾಕ್‌ನಿಂದಮೃತಪಟ್ಟಿರುತ್ತಾಳೆ. ವೃತ್ತಿಯಲ್ಲಿಟೈಲರಾಗಿರುವ ನಾಗರತ್ನಮ್ಮ ಮನೆಯಲ್ಲಿ ನೀರಿನ ಮೋಟರ್‌ಪಂಪನ್ನು ಆನ್ ಮಾಡುವ ಸಂದರ್ಭದಲ್ಲಿ ವಿದ್ಯುತ್ ಶಾಕ್‌ಗೆ ತುತ್ತಾಗಿದ್ದಾಳೆ. ತಳಕು ಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ನಗರಂಗೆರೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘ ಚುನಾವಣೆ : ಸಚಿವ ಡಿ.ಸುಧಾಕರ ಆಯ್ಕೆ

» **ಚಳ್ಳಕೆರೆ**



ನಗರಂಗೆರೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘ ನಿಯಮಿತದ ಐದು ವರ್ಷಗಳ ಅವಧಿಗೆ ಭಾನುವಾರ ಚುನಾವಣೆ ನಡೆದಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಪ್ರತಿನಿಧಿಸುವ ಸಹಕಾರ ಸಂಘವಾಗಿದೆ, ಚುನಾವಣೆ ಭಾರಿ ಬಿರುಸಿನಿಂದ ಕೂಡಿದ್ದು, ಈ ಭಾರಿ ಸಾಲಗಾರರು, ಸಾಲಗಾರರಲ್ಲದ ಕ್ಷೇತ್ರದಿಂದ ಕೆಲವೊಂದು ಹೊಸಮುಖಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ ಕೆ.ಎಸ್.ಶ್ರೀಧರ ಈ ಬಗ್ಗೆ ಮಾಹಿತಿ ನೀಡಿ, ಸಂಘದ ಎಸ್ಟಿ ಮೀಸಲು ಸ್ಥಾನದಿಂದ ಕೆ.ಆರ್.ಸುರೇಶ್–239 ಮತಗಳನ್ನು ಗಳಿಸಿ ಆಯ್ಕೆಯಾಗಿದ್ದು, ಎದುರಾಳಿ ಹಿರಿಯ ಸಹಕಾರಿ ದುರೀಣ ಸಿ.ಓಬಯ್ಯ–154 ಮತಪಡೆದು ಪರಾಭವಗೊಂಡಿದ್ದಾರೆ. ಬಿಸಿಎಂ ಎ ಕ್ಷೇತ್ರದಲ್ಲಿ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಗದ್ದಿಗೆ ಬಿ.ತಿಪ್ಪೇಸ್ವಾಮಿ, ಬಿಸಿಎಂ ಬಿ ಕ್ಷೇತ್ರದಿಂದ ಎಂ.ಕುಮಾರಸ್ವಾಮಿ, ಮಹಿಳಾ ಕ್ಷೇತ್ರದಿಂದಬೋರಮ್ಮ,ಕಮಲಮ್ಮ,ಸಾಲಗಾರರಲ್ಲದ ಕ್ಷೇತ್ರದಿಂದ ಎಸ್.ರಾಮಚಂದ್ರನಾಯಕ ಚುನಾಯಿತರಾಗಿದ್ದಾರೆ. ಚುನಾವಣೆ ಘೋಷಣೆಯಾದ ನಂತರ ನಾಮಪತ್ರ ವಾಪಾಸ್ ಪಡೆಯುವ ಸಂದರ್ಭದಲ್ಲಿ ಪರಸ್ಪರ ಚರ್ಚೆ ನಡೆದು ಒಟ್ಟು 5 ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿತ್ತು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಬಿ.ಸಿ.ಸಂಜೀವಮೂರ್ತಿ, ಶಾಂತಣ್ಣ, ರಾಜಣ್ಣ, ತಿಪ್ಪೇರುದ್ರಪ್ಪ ಆಯ್ಕೆಯಾದವರು.

# ಮದಕರಿ ಕಪ್ ನಮ್ಮೆಲ್ಲರ ಹೆಮ್ಮೆ: ಶಾಸಕ ಟಿ.ರಘುಮೂರ್ತಿ





» **ನಮ್ಮಜನ ಸಮಾಚಾರ ಚಿತ್ರದುರ್ಗ**

ಕ್ರೀಡಾಪಟುಗಳು ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣವನ್ನು ಅಳವಡಿಸಿಕೊಂಡರೆ ಮಾತ್ರ ಉತ್ತಮ ಕ್ರೀಡಾಪಟುವಾಗಿ ಹೊರಹೊಮ್ಮಲು ಸಾಧ್ಯ ಎಂದು ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಹೇಳಿದರು.

ನಗರದ ಹಳೆ ಮಾಧ್ಯಮಿಕ ಶಾಲಾ ಮೈದಾನದಲ್ಲಿ ದುರ್ಗಾ ಇಲೆವೆನ್ ಕ್ರಿಕೇಟರ್ಸ್ ಚಿತ್ರದುರ್ಗ ಇವರ ವತಿಯಿಂದ 3ನೇ ಬಾರಿಗೆ ಮದಕರಿ ಕಪ್– 2024 ಲೀಗ್ ಕಮ್ ನಾಕೌಟ್ ರಾಜ್ಯ ಮಟ್ಟದ ಟೆನ್ನಿಸ್ ಬಾಲ್ ಹೊನಲು–ಬೆಳಕಿನ ಕ್ರಿಕೆಟ್ ಟೂರ್ನಮೆಂಟನ್ನು ಭಾಗವಹಿಸಿ ಕ್ರೀಡಾಪಟುಗಳಿಗೆ ಶುಭ ಕೋರಿ ಮಾತನಾಡಿದರು.

ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಆಳ್ವಿಕೆ ನಡೆಸಿ ಸುಪ್ರಸಿದ್ದಿ ಪಡೆದ ಮದಕರಿನಾಯಕನ ಹೆಸರಲ್ಲಿ ರಾಜ್ಯ ಮಟ್ಟದ ಕ್ರಿಕೆಟ್ ನಡೆಸುತ್ತಿರುವದು ನಮ್ಮೆಲ್ಲರುಗೂ ಹೆಮ್ಮೆಯ ವಿಚಾರವಾಗಿದೆ.

ರಾಜ್ಯದ ನಾನಾ ಭಾಗಗಳಿಂದ 40 ಕ್ಕೂ ಹೆಚ್ಚು ತಂಡ ಭಾಗವಹಿಸಿದ್ದು ಎಲ್ಲಾ ತಂಡಗಳಿಗೂ ಶುಭವಾಗಲಿ ಎಲ್ಲಾರೂ ಪ್ರೀತಿಯಿಂದ ಆಟವಾಡಬೇಕು ಮತ್ತು ಕ್ರಿಕೆಟ್ ಯುವಕಲ್ಲಿ ಹೆಚ್ಚು ಆಕರ್ಷಣೆ ಮಾಡಿದ ಕ್ರೀಡೆಯಾಗಿದೆ.

ಚಿತ್ರದುರ್ಗ ನಗರದಲ್ಲಿ ರಣಜಿ, ಟಿ20 ಕ್ರಿಕೆಟ್ ಯಾವುದೇ ಕಮ್ಮಿ ಇಲ್ಲದಂತೆ ಈ ಕ್ರೀಡಾಂಗಣದಲ್ಲಿ ಮೂರನೇ ಬಾರಿಯ ಟೆನಿಸ್ ಬಾಲ್ ಕ್ರಿಕೆಟ್ ನಡೆಯುತ್ತಿದ್ದು ಸಾವಿರಾರು ಅಭಿಮಾನಿಗಳು ಕ್ರೀಡಾಂಗಣ ಸುತ್ತ ಕ್ರೀಡೆಯ ಸವಿಯನ್ನು ಸವಿಯುತ್ತಿರುವುದು ನೋಡಲು ಎರಡು ಕಣ್ಣುಸಾಲುತ್ತಿಲ್ಲ ಎಂದರು. ಕ್ರೀಡಾಪಟುಗಳು ದ್ವೇಷ, ಅಸೂಯೆಯಂತಹ ಭಾವನೆಗಳನ್ನು ಬದಿಗೊತ್ತಿ ಸ್ನೇಹದಿಂದ ಕ್ರೀಡೆಯನ್ನು ಎದುರಿಸಬೇಕು ಹಾಗೂ ನಿರ್ಣಾಯಕರ ನಿರ್ಣಯಕ್ಕೆ ತಲೆ ಬಾಗಬೇಕ.

ಕ್ರೀಡೆಗಳು ಮಾನಸಿಕ ಹಾಗೂ ಬೌದ್ಧಿಕ ಬೆಳವಣಿಗೆಗೆ ಸಹಕಾರಿಯಾಗಿವೆ. ಈ ನಿಟ್ಟಿನಲ್ಲಿ ಕ್ರೀಡಾಪಟುಗಳು ದೃಹಿಕವಾಗಿ ಸದೃಢರಾಗುತ್ತಾರೆ ಎಂದರು.

ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ ರಾಜ್ಯದ ನಾನಾ ಭಾಗಗಳಿಂದ ಕ್ರೀಡಾ ಸ್ಫೂರ್ತಿಯಿಂದ ಆಟವಾಡಬೇಕು. ಕ್ರೀಡೆಯನ್ನು ಯಾರು ಪ್ರೀತಿಯಿಂದ ಆಡುತ್ತಾರೆ ಅವರಿಗೆ ಗೆಲುವಾಗುತ್ತದೆ. ಮದಕರಿ ನಾಯಕನ ಹೆಸರಲ್ಲಿ ಪಂದ್ಯ ಆಯೋಜನೆ ಮಾಡಿರುವುದು ಸಂತೋಷದ ವಿಚಾರವಾಗಿದ್ದು ಮುಂದಿನ ದಿನದಲ್ಲಿ ಸಹ ಇಂತಹ ಕ್ರೀಡೆಗಳು ಜರುಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಮದಕರಿ ಕಪ್ ಆಯೋಜಕರಾದ ಸ್ನೇಹಜೀವಿ ಸೂರಪ್ಪ, ರಾಜೀವ್, ರಾಮು,ನಾಗರಾಜ್ ಮತ್ತು ಮಾಜಿ ಜಿ.ಪಂ.ಸದಸ್ಯ ಬಾಬುರೆಡ್ಡಿ, ಕಾಂಗ್ರೆಸ್ ಮುಖಂಡ ಅಂಜಿನಪ್ಪ, ರಾಜೇಶ್, ಅಹೋಬಲ ಟಿವಿಎಸ್ ಅರುಣ್ ಕುಮಾರ್, ಫಾರುಕ್ ಇತರರಿದ್ದರು.

## ವಾಲ್ಮೀಕಿಯ ಆದರ್ಶ ಜೀವನ ಮನುಕುಲಕ್ಕೆ ಮಾದರಿ

» **ಹೊಸದುರ್ಗ**

ಮನುಕುಲದ ಶ್ರೇಷ್ಠ ಸಂತ ದಾರ್ಶನಿಕ ಮಹರ್ಷಿ ವಾಲ್ಮೀಕಿ ರಾಮಾಯಣ ಮನುಕುಲದ ಶ್ರೇಷ್ಠ ಗ್ರಂಥವಾಗಿದ್ದು ಪ್ರಭು ಶ್ರೀ ರಾಮನ ಆದರ್ಶ ವ್ಯಕ್ತಿತ್ವ ಮನುಕುಲಕ್ಕೆ ಮಾದರಿಯಾಗುವಂತೆ ಮಹರ್ಷಿ ವಾಲ್ಮೀಕಿಗಳು ಚಿತ್ರಸಿದ್ದಾರೆ ಎಂದು ಎಸ್ ಟಿ ಮೋರ್ಚಾ ಅಧ್ಯಕ್ಷ ವಿಜಯಕುಮಾರ್ ಮಳಲಿ ತಿಳಿಸಿದರು.ಮಹರ್ಷಿ ವಾಲ್ಮೀಕಿ ಗೆಳೆಯರ ಬಳಗ, ವತಿಯಿಂದ ತಾಲೂಕಿನ ಮತ್ತೋಡು ಹೋಬಳಿ ನಾಗತಿಹಳ್ಳಿಯಲ್ಲಿ ನಡೆದ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸೀತಾಮಾತೆಯ ಪತಿಭಕ್ತಿ ಪ್ರಭು ಶ್ರೀ ರಾಮನ ಮಾತಾ ಪಿತೃ ಭಕ್ತಿ ರಾಮ ಲಕ್ಷ್ಮಣ ಭರತ ಶತ್ರುಘ್ನರ ಸಹೋದರತ್ವದ ಗುಣಗಾನವನ್ನು ವಾಲ್ಮೀಕಿ ಮಹರ್ಷಿಗಳು ಎಳೆ ಎಳೆಯಾಗಿ ಚಿತ್ರಿಸಿ ರಾಮಾಯಣದ ಮೂಲಕ ಮನುಕುಲಕ್ಕೆ ತಿಳಿಸಿದ್ದಾರೆ ಪ್ರಪಂಚದ ಯಾವುದೇ ಕೃತಿಗಳಿಗಿಂತ ಮಿಗಿಲಾಗಿ ರಾಮಾಯಣ ಕೃತಿಯಲ್ಲಿ ಚಿಂತಿಸಿದ್ದಾರೆ ಎಂದು ಹೇಳಿದರು. ಯುವ ಮುಖಂಡ ಅರುಣ್ ಗಂಗಾಧರಪ್ಪ ಮಾತನಾಡಿ ತಲತಲಾಂತರದಿಂದ ವಾಲ್ಮೀಕಿ ಸಮುದಾಯ ಶಿಕ್ಷಣ ಮತ್ತು ಆರ್ಥಿಕತೆಯಲ್ಲಿ ಹಿಂದುಳಿದಿದ್ದು ನಮ್ಮ ಮಕ್ಕಳಿಗೆ ಹೆಚ್ಚು ಹೆಚ್ಚು ಶಿಕ್ಷಣ ಕೊಡಿಸುವುದರ ಮೂಲಕ ಸಮಾಜದ ಮುಖ್ಯ ವಾಹಿನಿಗೆ ಬರಬೇಕು. ಪ್ರತಿ ವರ್ಷ ಸಮಾಜದ ಸಂಘಟನೆಗಾಗಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದಪುರಿ ಶ್ರೀಗಳ ನೇತೃತ್ವದಲ್ಲಿ ಬರುವ ಫೆಬ್ರವರಿ 8 ಮತ್ತು 9 ನೇ ತಾರೀಖು ನಮ್ಮ ಕುಲ ಗುರು ವಾಲ್ಮೀಕಿ ಹೆಸರಿನಲ್ಲಿ ವಾಲ್ಮೀಕಿ ಜಾತ್ರೆಯನ್ನು ಏರ್ಪಡಿಸಿದ್ದು ಸಮುದಾಯದ ಎಲ್ಲಾ ಯುವಕರು ವಾಲ್ಮೀಕಿ ಜಾತ್ರೆಗೆ ಹೋಗಿ ಸಮಾಜದ ಸಂಘಟನೆಗೆ ತೊಡಗಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಚಿದಾನಂದ್, ಕುಮಾರ್, ನವೀನ್, ಶ್ರೀನಿವಾಸ್, ರವಿಕುಮಾರ್, ರುದ್ರೇಶ್, ದಯಾನಂದ್, ಚಂದ್ರಶೇಖರ, ಮೋಹನ್, ಗಿರೀಶ್, ವಿಜಯ್ ಕುಮಾರ್,ವಿಶ್ವನಾಥ್, ಚೇತನ್, ತೇಜಸ್, ದಯಾನಂದ, ಹಾಗೂ ವಾಲ್ಮೀಕಿ ಗೆಳೆಯರ ಬಳಗ ನಾಗತಿಹಳ್ಳಿಯ ಯುವಕರು ಪಾಲ್ಗೊಂಡಿದ್ದರು,



**ಪ್ರಮುಖ ಸುದ್ದಿ**

# ಸಿಂಗ್ ಅಗಲಿಕೆ; ಇಡೀ ಜಗತ್ತಿಗೆ ತುಂಬಲಾರದ ನಷ್ಟ

» **ಚಿತ್ರದುರ್ಗ**

ಶ್ರೇಷ್ಠ ಅರ್ಥಶಾಸ್ತ್ರಜ್ಞ ಡಾ.ಮನಮೋಹನ್ ಸಿಂಗ್ ಅಗಲಿಕೆ ; ಭಾರತಕ್ಕಷ್ಟೇ ಅಲ್ಲ ಇಡೀ ಜಗತ್ತಿಗೆ ತುಂಬಲಾರದ ನಷ್ಟ : ಮಾಜಿ ಸಚಿವ ಹೆಚ್.ಆಂಜನೇಯ

ಈ ದೇಶ ಕಂಡ ಮಹಾನ್ ಆರ್ಥಿಕ ತಜ್ಞ, ಆರ್ಥಿಕ ಸುಧಾರಕ ಡಾ.ಮನಮೋಹನ್ ಸಿಂಗ್ ಅವರು ಪ್ರಧಾನಿ ಆಗುತ್ತಾರೆಂದು ಯಾರೂ ಕೂಡ ಊಹಿಸಿರಲಿಲ್ಲ. ಅವರ ಚಿಂತನೆಗಳು, ಆರ್ಥಿಕ ನೀತಿಗಳೇ ಅವರನ್ನು ಪ್ರಧಾನಿ ಹುದ್ದೆಗೆ ಏರುವಂತೆ ಮಾಡಿದವು ಎಂದು ಮಾಜಿ ಸಚಿವ ಹಾಗೂ ಕೆಪಿಸಿಸಿ ಉಪಾಧ್ಯಕ್ಷರಾದ ಹೆಚ್.ಆಂಜನೇಯ ಅವರು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಏರ್ಪಡಿಸಿದ್ದ ಮಾಜಿ ಪ್ರಧಾನಮಂತ್ರಿ ದಿವಂಗತ ಡಾ.ಮನಮೋಹನ್ ಸಿಂಗ್ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಮಾಜಿ ಸಚಿವ ಆಂಜನೇಯ ಅವರು ನಾನು ಯುವ ಕಾಂಗ್ರೆಸ್ ಅಧ್ಯಕ್ಷನಾಗಿದ್ದ ಕಾಲದಿಂದಲೂ, ಕಳೆದ ಮೂವತ್ತು ವರ್ಷಗಳಿಂದ ಡಾ.ಮನಮೋಹನ್ ಸಿಂಗ್ ಅವರನ್ನು ನೋಡುತ್ತಾ ಬಂದಿದ್ದೇನೆ. ಕಾಂಗ್ರೆಸ್ ಘಟಕವೊಂದರ ಅಧ್ಯಕ್ಷರಾಗಿದ್ದ



ಅವರು ಬಹಳ ಸೌಮ್ಯ ಸ್ವಭಾವದ, ಮಿತ ಭಾಷಿಯಾಗಿದ್ದರು. ವಿರೋಧ ಪಕ್ಷದವರು ಇವರನ್ನು ಮೌನಿ ಎಂದು ಕರೆಯುತ್ತಿದ್ದರು. ಆದರೆ ಇವರು ಮೌನಿಯಲ್ಲ ಮಹಾನ್ ಜ್ಞಾನಿಯಾಗಿದ್ದರು. ವಿತ್ತ ಸಚಿವರಾದ ನಂತರ ಈ ದೇಶದ ಆರ್ಥಿಕ ಬೆಳವಣಿಗೆಗೆ ಸಾಕಷ್ಟು ಕೊಡುಗೆಗಳನ್ನು ನೀಡುತ್ತಾ ಬಂದರು.

ಎಂದು ತಿಳಿಸಿದರು.

ಪಂಡಿತ್ ಜವಾಹರ್ ಲಾಲ್ ನೆಹರೂ ಅವರು ಈ ದೇಶದ ಅಭಿವೃದ್ಧಿಗೆ ಬುನಾದಿ ಹಾಕಿದ ನವ ನಿರ್ಮಾಪಕರಾದರೆ, ರಾಜೀವ್ ಗಾಂಧಿ ಅವರು ಈ ದೇಶದ 19 ನೇ ಶತಮಾನವನ್ನು 21 ನೇ ಶತಮಾನಕ್ಕೆ ಕೊಂಡೊಯ್ದು ಅಭಿವೃದ್ಧಿಪಡಿಸಿದರು. ಇದೇ ಹಾದಿಯಲ್ಲಿ ಸಾಗಿ ಬಂದ ಡಾ.ಮನಮೋಹನ್ ಸಿಂಗ್ ಅವರು 10 ವರ್ಷಗಳ ಕಾಲ ರಾಜಕೀಯ ರಹಿತವಾಗಿ, ಅಭಿವೃದ್ಧಿಗೆ ಪೂರಕವಾಗಿ ಈ ದೇಶದ ಪ್ರಧಾನಿಯಾಗಿ ಆಳಿದಂತಹ ಮಹಾನ್ ದೇಶಪ್ರೇಮಿ, ಮಹಾನ್ ನಾಯಕರಾಗಿದ್ದರು. ಅಮೇರಿಕಾದಂತಹ ವಿಶ್ವದ ದೊಡ್ಡಣ್ಣ ಎನಿಸಿಕೊಂಡಿರುವ ದೇಶವು ಆರ್ಥಿಕ ದಿವಾಳಿಯಾಗುವಂತಹ ಸಂದರ್ಭದಲ್ಲಿ ಅವರು ಮನಮೋಹನ್ ಸಿಂಗ್ ಅವರನ್ನು ಸಂಪರ್ಕಿಸಿ ಆರ್ಥಿಕ ಸಲಹೆ ಪಡೆದಿದ್ದರು. ಮನಮೋಹನ್ ಸಿಂಗ್ ಅವರು ಅಂತಹ ಮೇರು ಆರ್ಥಿಕ ಸುಧಾರಕರಾಗಿದ್ದರು. ಇಂತಹ ಮಹಾನ್ ನಾಯಕನ ಅಗಲಿಕೆಯಿಂದ ತೀವ್ರ ದುಃಖವಾಗಿದೆ. ಇವರ ಅಗಲಿಕೆ ಕೇವಲ ನಮ್ಮ ರಾಷ್ಟ್ರಕ್ಕಲ್ಲ ಇಡೀ ಜಗತ್ತಿಗೆ ತುಂಬಲಾರದ ನಷ್ಟವಾಗಿದೆ." ಎಂದು ತಿಳಿಸಿದರು.

ಈ ದೇಶದಲ್ಲಿ ಹಲವು ಜಾತಿ ಧರ್ಮದ ಬಡವರಿದ್ದು ಅವರು ಹಸಿವಿನಿಂದ ಬಳಲುತ್ತಿದ್ದಾರೆ. ಉದ್ಯೋಗ ಮತ್ತು ಅನ್ನಕ್ಕಾಗಿ ಗುಳೇ ಹೋಗುವ ಪರಿಸ್ಥಿತಿ ಇತ್ತು. ಹಿಂದೆ ನಮ್ಮ ಕಾಲದಲ್ಲಿ ಕೂಲಿಗೆ ಪ್ರತಿಯಾಗಿ ಹಣ ಪಡೆಯುವಂತಿರಲಿಲ್ಲ. ಆಹಾರ ಪಡೆದು ಊಟ ಮಾಡುತ್ತಿದ್ದರು. ನಂತರ ಕೂಲಿ ಮಾಡಿ ಕಾಳು ಪಡೆಯುವ ಕಾಲ ಬಂತು. ಆದರೆ ಈಗ ಪರಿಸ್ಥಿತಿ ಆಗಿಲ್ಲ. ಇಂತಹ ಸ್ಥಿತಿಗಳನ್ನು ಗಮನಿಸಿಯೇ ಮನಮೋಹನ್ ಸಿಂಗ್ ಅವರು ಆಹಾರ ಭದ್ರತಾ ಕಾಯ್ದೆ, ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆ ಅಂತಹ ಅತ್ಯುತ್ತಮವಾದ ಯೋಜನೆಗಳನ್ನು ಜಾರಿಗೊಳಿಸಿದರು.

ಪ್ರಸ್ತುತ ಚಿತ್ರದುರ್ಗ ಜಿಲ್ಲೆಯಲ್ಲಿ ಸುಮಾರು 3 ಲಕ್ಷದ 33 ಸಾವಿರ ಜಾಬ್ ಕಾರ್ಡುಗಳಿದ್ದು , 7 ಲಕ್ಷದ 73 ಸಾವಿರ ಕೂಲಿ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಇದಕ್ಕೆ ನೇರ ಕಾರಣ ಡಾ.ಮನಮೋಹನ್ ಸಿಂಗ್ ಅವರಾಗಿದ್ದಾರೆ.

ನಮ್ಮ ನಾಯಕಿಯಾದ ಸೋನಿಯಾಗಾಂಧಿ ಅವರಿಗೆ ಎರಡು ಬಾರಿ ಈ ದೇಶದ ಪ್ರಧಾನಿಯಾಗುವ ಅವಕಾಶ ಒದಗಿ ಬಂದರೂ ಸಹ ಡಾ.ಮನಮೋಹನ್ ಸಿಂಗ್ ಅವರನ್ನು ಈ ದೇಶದ ಪ್ರಧಾನಿಯನ್ನಾಗಿ ಮಾಡುವ ಮೂಲಕ ರಾಜಕೀಯವಾಗಿ ಜಗತ್ತಿನ ಮಹಾನ್ ತ್ಯಾಗಿ ಎನಿಸಿಕೊಂಡಿದ್ದಾರೆ.

ಹೀಗೆ ಅನಿರೀಕ್ಷಿತವಾಗಿ ಪ್ರಧಾನಿ ಹುದ್ದೆಗೇರಿದ ಡಾ.ಮನಮೋಹನ್ ಸಿಂಗ್ ಅವರು ಶಿಕ್ಷಣಹಕ್ಕು ಕಾಯ್ದೆ, ಮಾಹಿತಿ ಹಕ್ಕು ಕಾಯ್ದೆ, ಆಹಾರ ಭದ್ರತಾ ಕಾಯ್ದೆ , ಆರ್ಥಿಕ ಉದಾರೀಕರಣ ನೀತಿ ಮುಂತಾದ ಮಹಾನ್ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಭಾರತವನ್ನು ಆರ್ಥಿಕ ಸಂಕಷ್ಟಗಳಿಂದ ದೂರ ಮಾಡಿ ಸದೃಢ ದೇಶ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ ಮಹಾನ್ ವ್ಯಕ್ತಿಯಾಗಿದ್ದಾರೆ ಎಂದು ತಿಳಿಸಿದರು

## ಫಾಸ್ಟ್ ನ್ಯೂಸ್

### ದೈಹಿಕ ಶಿಕ್ಷಕ ಕಾರೇಕರಂಗಣ್ಣ ನಿಧನ

» **ಚಳ್ಳಕೆರೆ**



ನಗರದ ಹಳೇಟೌನ್ ನಿವಾಸಿ, ವೃತ್ತಿಯಲ್ಲಿ ಈರುಳ್ಳಿ ವ್ಯಾಪಾರಿಯಾಗಿದ್ದು ಪ್ರವೃತ್ತಿಯಲ್ಲಿ ವಾಸವಿಶಾಲೆಯ ದೈಹಿಕ ಶಿಕ್ಷಕನಾಗಿ ಕಾರ್ಯನಿರ್ವಹಿಸುತ್ತಿದ್ದ ಕಾರೇಕರಂಗಣ್ಣ (45) ಅನಾರೋಗ್ಯ ಹಿನ್ನೆಲೆಯಲ್ಲಿ ಮಣಿಪಾಲ ಆಸ್ಪತ್ರೆಯಲ್ಲಿ ಶನಿವಾರ ನಿಧನರಾಗಿದ್ದಾರೆ. ನಗರದ ಪಾವಗಡ ರಸ್ತೆಯ ರುದ್ರಭೂಮಿಯಲ್ಲಿ ಭಾನುವಾರ ಸಂಜೆ ಅಂತ್ಯಕ್ರಿಯೆ ನಡೆಯಿತು. ನೂರಾರು ಜನರು ಭಾಗವಹಿಸಿದ್ದರು. ಪತ್ನಿ, ಇಬ್ಬರುಮಕ್ಕಳು ಅಪಾರ ಬಂಧುಬಳಗವನ್ನು ಅವರು ಅಗಲಿದ್ದಾರೆ.

### ಚೌಡೇಶ್ವರಿ ಕಡೇ ಕಾರ್ತಿಕ



» **ಚಿತ್ರದುರ್ಗ**

ನಗರದ ದೊಡ್ಡಪೇಟೆಯ ಜೈನ್ ದೇವಾಲಯದ ಹಿಂಭಾಗದ ಜವಳೇರ ಬೀದಿಯಲ್ಲಿನ ಬಂಡೆಯಲ್ಲಿ ನೆಲಸಿರುವ ಶ್ರೀ ಚೌಡೇಶ್ವರಿ ಅಮ್ಮನವರ ಕಡೇ ಕಾರ್ತಿಕ,ದೀಪಾರಾಧನೆಕಾರ್ಯಕ್ರಮವೂಶುಕ್ರವಾರ ರಾತ್ರಿ ವಿಜೃಂಭಣೆಯಿಂದ ನಡೆಸಲಾಯಿತು.ರಾಜರ ಕಾಲದಿಂದಲೂ ಇಲ್ಲಿನ ಚೌಡೇಶ್ವರಿ ಅಮ್ಮನವರನ್ನು ಪೂಜೆ ಮಾಡಿಕೊಂಡು ಬರಲಾಗುತ್ತಿದೆ, ತದ ನಂತರ ಜವಳೇರ ಬೀದಿಯಲ್ಲಿನ ಭಕ್ತಾಧಿಗಳು ಸೇರಿಕೊಂಡು ಅಮ್ಮನವರ ಆರಾಧನೆಯನ್ನು ಮಾಡಲಾ ರಂಭಿಸಿದರು. ಇದರಿಂದ ಇಲ್ಲಿನ ಚೌಡೇಶ್ವರಿ ಅಮ್ಮನವರಿಗೆ ಪ್ರತಿ ದಿನ ಪೂಜೆಯನ್ನು ಮಾಡುವುದರ ಮೂಲಕ ಆರಾಧನೆಯನ್ನು ಮಾಡಲಾಗುತ್ತಿದೆ, ಇದರಂತೆ ಪ್ರತಿ ವರ್ಷವೂ ಸಹಾ ಡಿಸೆಂಬರ್ ಮಾಹೆಯಲ್ಲಿ ಚೌಡೇಶ್ವರಿ ಅಮ್ಮನವರಿಗೆ ಕಾರ್ತಿಕ ಮಹೋತ್ಸವವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಅಂದು ಸಂಜೆ ಅಮ್ಮನವರಿಗೆ ಕಡೇ ಕಾರ್ತಿಕ, ದೀಪರಾಧನೆ ಅಂಗವಾಗಿ ಅಮ್ಮನವರಿಗೆ ವಿವಿಧ ರೀತಿಯ ಹೂಗಳಿಂದ ಅಲಂಕಾರವನ್ನು ಮಾಡಲಾಗಿತ್ತು, ಇದ್ದಲ್ಲದೆ ದೇವಾಲಯ ಪೂರ್ತಿ ವಿದ್ಯುತ್ ದೀಪಗಳಿಂದ ಅಲಂಕಾರ ಮಾಡಲಾಗಿತು. ಸಂಜೆಯಿಂದಲೇ ಚೌಡೇಶ್ವರಿ ಅಮ್ಮನವರಿಗೆ ಅಲಂಕಾರವನ್ನು ಮಾಡಲಾಗಿದ್ದು, ಸಂಜೆ 8 ಗಂಟೆಗೆ ಮಹಾ ಮಂಗಳರಾತಿಯನ್ನು ನೇರವೇರಿಸಲಾಯಿತು. ದೇವಾಲಯಕ್ಕೆ ಆಗಮಿಸಿದ ಭಕ್ತಾಧಿಗಳು ಪೂಜೆಯನ್ನು ಮಾಡಿಸುವುದರ ಮೂಲಕ ಅಮ್ಮನವರ ಕೃಪೆಗೆ ಪಾತ್ರರಾದರು. ಶ್ರೀ ಚೌಡೇಶ್ವರಿ ದೇವಸ್ಥಾನಅಭೀವೃದ್ಧಿಸ 'ೇವಾಸಮಿತಿವತಿಯಿಂದ ಕಾರ್ತಿಕ, ದೀಪಾರಾಧನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತು.

### ಡಿ.31 ನೇರ ಸಂದರ್ಶನ

» **ಚಿತ್ರದುರ್ಗ**

ಡಿ.31ರ ಮಂಗಳವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ನಗರದ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ನಡೆಯಲಿದೆ. ಮೂರಕ್ಕೂ ಹೆಚ್ಚು ಖಾಸಗಿ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೋಮೋ, ಐಟಿಐ, ಯಾವುದೇ ಪದವಿ ಹೊಂದಿರುವ 18 ರಿಂದ 30 ವರ್ಷದೊಳಗಿನ ಪುರುಷ ಅಥವಾ ಮಹಿಳೆ ಅಭ್ಯರ್ಥಿಗಳನ್ನು ನೇರವಾಗಿ ಆಯ್ಕೆ ಮಾಡಿಕೊಳ್ಳಲಿದ್ದು, ಅಭ್ಯರ್ಥಿಗಳು 5 ಬಯೋಡಾಟಾ ಪ್ರತಿ, ವಿದ್ಯಾರ್ಹತೆಯ ಪ್ರಮಾಣ ಪತ್ರಗಳು ಹಾಗೂ ಫೋಟೋಗಳೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಸ್ಟೇಡಿಯಂ ತಿರುವು, ಹಳೇ ವೈಶಾಲಿ ಗೇಟ್ ಹತ್ತಿರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿ ದೂರವಾಣಿ ಸಂಖ್ಯೆ 7022459064, 8105619020, 9945587060, 9964528212, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಜ.01ರಂದು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣೆ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಜನವರಿ 1ರಂದು ಬೆಳಿಗ್ಗೆ 11ಕ್ಕೆ ನಗರದ ತ.ರಾ.ಸು ರಂಗಮಂದಿರದಲ್ಲಿ "ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ" ಸಮಾರಂಭ ಹಮ್ಮಿಕೊಳ್ಳಲಾಗಿದೆ.ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸಲಿದ್ದಾರೆ. ಚಿಕ್ಕಜಾಜೂರಿನ ನಿವೃತ್ತ ಶಿಕ್ಷಕ ರವೀಂದ್ರಚಾರ್ ಉಪನ್ಯಾಸ ನೀಡುವರು.

# ಕಾಲುವೇಹಳ್ಳಿ ಬಂಡೆ ಬಸವೇಶ್ವರಸ್ವಾಮಿ ರಥೋತ್ಸವ







» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಕಾರ್ತಿಕ ಮಾಸದಹಿನ್ನೆಲೆಯಲ್ಲಿಶ್ರೀಬಂಡೇಬಸವೇಶ್ವರಸ್ವಾಮಿಯ ಜಾತ್ರೆ ವೈಭವದಿಂದ ನಡೆಯಿತು. ಜಾತ್ರೆಗೆ ಕರ್ನಾಟಕವೂ ಸೇರಿದಂತೆ ಆಂಧ್ರ ಪ್ರದೇಶದಿಂದಲೂ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆದರು.ವಿಶೇಷವೆಂದರೆ ಶ್ರೀಬಂಡೆ ಬಸವೇಶ್ವರಸ್ವಾಮಿ ಜಾತ್ರೆಯ ದಿನದಂದೇ ಗ್ರಾಮದ ಶ್ರೀಆಂಜನೇಯಸ್ವಾಮಿ, ನೀಲಕಂಠೇಶ್ವರಸ್ವಾಮಿ, ಕಾಳಿಕಾದೇವಿ ದೇವಸ್ಥಾನಗಳಲ್ಲೂ ಸಹ ವಿಶೇಷ ಎಲೆಪೂಜಾ ಕಾರ್ಯಕ್ರಮಗಳನ್ನು ನಡೆಸಲಾಯಿತು. ಶನಿವಾರ ಬೆಳಗಿನ ಜಾವ ಗ್ರಾಮದ ಕೆರೆಯಂಗಳದಲ್ಲಿ ಗಂಗಾಪೂಜೆಯಲ್ಲಿ ಭಕ್ತರು ಹಾಗೂ ಸುಹಾಸಿನಿಯರು ಪಾಲ್ಗೊಂಡು ಭಕ್ತಿಯಿಂದ ಪೂಜೆ ಅರ್ಪಿಸಿದ ನಂತರ ಗ್ರಾಮದ ಪ್ರಮುಖ ರಸ್ತೆಯಲ್ಲಿ ಶ್ರೀಬಂಡೆಬಸವೇಶ್ವರಸ್ವಾಮಿಯ ಪಲಕ್ಕಿ ಉತ್ಸವವನ್ನು ನಡೆಸಲಾಯಿತು.ಮಹಾಮಂಗಳಾರತಿ, ರುದ್ರಾಭಿಷೇಕ, ನಂತರ ಪ್ರಸಾದ ವಿನಿಯೋಗ ನಡೆಸಲಾಯಿತು. ಮೆರವಣಿಗೆಯೂದ್ದಕ್ಕೂ ಕೋಲಾಟ, ಭಜನೆ, ಚಂಡಿವಾದ್ಯ, ಗೊಂಬೆಕುಣಿತ, ನಂದಿಕೋಲು, ಡೊಳ್ಳುಕುಣಿತ, ಕೀಲುಕುದುರೆ ಮುಂತಾದ ಜಾನಪದಕಲಾತಂಡಗಳು ಮೆರಗುವಣಿಗೆಗೆ ಮೆರತುತಂದವು.ಗ್ರಾಮದ ಶ್ರೀಅಯ್ಯಪ್ಪಸ್ವಾಮಿ ಮಾಲಾಧಾರಿಗಳು ಆಂಜನೇಯಸ್ವಾಮಿ ಭಜನಾಮಂಡಳಿಯಿಂದ ಭಜನಾ ಕಾರ್ಯಕ್ರಮಗಳು ಅದ್ದೂರಿಯಾಗಿ ನಡೆದವು. ಸಂಜೆ ಸುಮಾರು 5 ಗಂಟೆಗೆ ಶ್ರೀಬಂಡೆಬಸವೇಶ್ವರಸ್ವಾಮಿಯ ರಥೋತ್ಸವ ದೇವಸ್ಥಾನದ ಆವರಣದಿಂದ ಸಾವಿರಾರು ಭಕ್ತರ ಜಯಕಾರಗಳೊಂದಿಗೆ ಆರಂಭಿಸಲಾಯಿತು. ಗ್ರಾಮದ ಮುಖಂಡ ರೇಣುಕಸ್ವಾಮಿ ರಥದ ಮೇಲ್ಭಾಗ ಕಳಸ ಸ್ಥಾಪನೆ ಮಾಡಿದರು. ನಿರೀಕ್ಷೆಗೂ ಮೀರಿ ಹೆಚ್ಚಿನ ಸಂಖ್ಯೆ ಭಕ್ತರು ಪಾಲ್ಗೊಂಡಿದ್ದರು. ಶ್ರೀಬಂಡೆಬಸವೇಶ್ವರಸ್ವಾಮಿ ಹಾಗೂ ಪಕ್ಕದ ಎಲ್ಲಾ ದೇವಸ್ಥಾನಗಳನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಗ್ರಾಮದೆಲ್ಲೆಡೆ ಕೇಸರಿ ಬಾವುಟಗಳು ರಾರಾಜಿಸಿದವು.ಮುಕ್ತಿಬಾವುಟ ಹರಾಜು :-ದೇವಸ್ಥಾನದ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಶ್ರೀಸ್ವಾಮಿಯ ರಥದ ಮೇಲೆ ಅಲಂಕರಿಸಿದ್ದ ಮುಕ್ತಿ ಬಾವುಟವನ್ನು ಸಾರ್ವಜನಿಕವಾಗಿ ಹರಾಜು ಮಾಡಲಾಯಿತು. ಗ್ರಾಮಪಂಚಾಯಿತಿ ಸದಸ್ಯ ಎನ್.ಗಾದ್ರಿಪಾಲಯ್ಯ 41 ಸಾವಿರಕ್ಕೆ ಮುಕ್ತಿಬಾವುಟವನ್ನು ಹರಾಜಿನಲ್ಲಿ ಪಡೆದರು. ಗ್ರಾಮದ ಮುಖಂಡರಾದ ಕೆ.ಪಿ.ಭೂತಯ್ಯ, ಜಾಜೂರುಹನುಮಂತಪ್ಪ, ಮಹಂತೇಶ್‌ನಾಯಕ, ಕೆ.ಒ.ಪಾಲಣ್ಣ, ಜೆ.ಪಿ.ಜಯಪಾಲಯ್ಯ, ಕಾಲುವೇಹಳ್ಳಿರಂಗಸ್ವಾಮಿ, ಜಿ.ಕೆ.ರಾಮಣ್ಣ, ನೀಲಕಂಠಶೆಟ್ಟಿ, ಡಿ.ಆರ್.ತಿಮ್ಮಣ್ಣ, ಕರಿಬಸಯ್ಯ, ಪಿ.ಶ್ರೀನಿವಾಸ್, ರವಿ, ರಾಘವೇಂದ್ರ, ರಾಕೇಶ್, ಸೊಪ್ಪಿನಪಾಲಯ್ಯ ಪಾಲ್ಗೊಂಡಿದ್ದರು.

## ದೇಶದ ಬಡ ಜನರ ಸೇವೆ ಮಾಡಿದ ಏಕೈಕ ಪಕ್ಷ ಕಾಂಗ್ರೆಸ್

» **ಚಳ್ಳಕೆರೆ**



ದೇಶದ ಇತಿಹಾಸದಲ್ಲಿ 140 ವರ್ಷಗಳ ಕಾಲ ಜನರಿಗೆ ಸ್ಪಂದಿಸಿದ ಏಕೈಕ ರಾಷ್ಟ್ರೀಯ ಪಕ್ಷ ಕಾಂಗ್ರೆಸ್. ಸ್ವಾತಂತ್ರ್ಯ ಪಡೆದ ನಂತರ ದೇಶದ ವಿವಿಧ ರಾಜ್ಯಗಳಲ್ಲಿ ಹಾಗೂ ಕೇಂದ್ರದಲ್ಲಿ ಸುಧೀರ್ಘ ಕಾಲ ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷ ಇಂದಿಗೂ ಸಹ ಜನರ ಸೇವೆಯಲ್ಲಿ ತೊಡಗಿದೆ. ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಯಾವುದೇ ಸಂದರ್ಭದಲ್ಲೂ ಪಕ್ಷದ ಗೌವರ, ಘನತೆಗೆ ಧಕ್ಕೆಯಾಗದಂತೆ ಜಾಗ್ರತೆ ವಹಿಸಬೇಕೆಂದು ಕಾಂಗ್ರೆಸ್ ಪಕ್ಷ ಹಿರಿಯ ದುರೀಣ ಟಿ.ತಿಪ್ಪೇಸ್ವಾಮಿ ತಿಳಿಸಿದರು.

ಶಾಸಕರ ಭವನದಲ್ಲಿ ಚಳ್ಳಕೆರೆ ಮತ್ತು ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಘಟಕ ಹಮ್ಮಿಕೊಂಡಿದ್ದ ಕಾಂಗ್ರೆಸ್ ಪಕ್ಷದ ಸಂಸ್ಥಾಪನ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ರಾಷ್ಟ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಹಲವಾರು ಪಕ್ಷಗಳು ಪೈಪೋಟಿ ಒಡ್ಡಿದರೂ ಬಹುತೇಕ ದೇಶದಲ್ಲಿ ನಡೆದ ಎಲ್ಲಾ ಚುನಾವಣೆಗಳಲ್ಲಿ ಗೆಲುವು ಸಾಧಿಸಿದ ಕೀರ್ತಿ ನಮ್ಮ ಪಕ್ಷದ್ದು. ಆದರೆ, ಕಳೆದ ಹತ್ತು ವರ್ಷಗಳಿಂದ ಕೇಂದ್ರದಲ್ಲಿರುವ ಎನ್‌ಡಿಎ ಸರ್ಕಾರ ಬೇರೆ ಪಕ್ಷಗಳ ಸಹಕಾರದೊಂದಿಗೆ ಅಧಿಕಾರ ನಡೆಸುತ್ತಿದೆ. ಬಡ ಜನರ ನೋವಿಗೆ ಸ್ಪಂದಿಸುವಯಾವುದೇಕಾರ್ಯಕ್ರಮಕೇಂದ್ರದಿಂದ ಇದುವರೆಗೂ ಜಾರಿಯಾಗಿಲ್ಲವೆಂದರು.

ಹಿರಿಯ ಮುಖಂಡ ಟಿ.ಪ್ರಭುದೇವ್ ಮಾತನಾಡಿ, ಕಳೆದ ವರ್ಷ ರಾಜ್ಯದ ಚುಕ್ಕಾಣಿ ಹಿಡಿದ ಕಾಂಗ್ರೆಸ್ ಪಕ್ಷ ನಿರೀಕ್ಷೆಗೂ ಮೀರಿ ಉತ್ತಮ ಆಡಳಿತವನ್ನು ನೀಡುತ್ತಾ ಬಂದಿದೆ. ರಾಜ್ಯದಲ್ಲಿ ಜಾರಿ ಇರುವ ಐದು ಗ್ಯಾರಂಟಿಗಳನ್ನು ಬೇರೆ, ಬೇರೆ ಪಕ್ಷಗಳ ಸರ್ಕಾರಗಳು ಅನುಸರಿಸುವಂತಾಗಿದೆ. ಇದು ಕಾಂಗ್ರೆಸ್ ಪಕ್ಷದ ಹೆಗ್ಗಳಿಕೆ. ಮುಂಬರುವ ಜಿಲ್ಲಾ, ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಪಡೆದು ಅಧಿಕಾರ ಹಿಡಿಯಲು ಕಾರ್ಯಕರ್ತರು ಸಜ್ಜಾಗಬೇಕೆಂದರು.

ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮಭರಮಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ವೀರಭದ್ರಪ್ಪ, ಜಿ.ಟಿ.ಶಶಿಧರ, ಮಹಿಳಾ ಘಟಕದ ಅಧ್ಯಕ್ಷೆ ಗೀತಾಬಾಯಿ, ಬಿ.ಎಂ.ಭಾಗ್ಯಮ್ಮ, ನಾಮನಿರ್ದೇಶನ ಸದಸ್ಯರಾದ ಬಡಗಿಪಾಪಣ್ಣ, ಅನ್ವರ್‌ಮಾಸ್ಟರ್, ನಟರಾಜ, ಆರ್.ವೀರಭದ್ರ, ನಾಟಕ ಅಕಾಡೆಮಿ ಮಾಜಿ ಸದಸ್ಯ ಪಿ.ತಿಪ್ಪೇಸ್ವಾಮಿ, ರುದ್ರಮುನಿ ಮುಂತಾದವರು ಉಪಸ್ಥಿತರಿದ್ದರು.

## ಮನಮೋಹನ್‌ಸಿಂಗ್ ಭಾವಚಿತ್ರಕ್ಕೆ ವೇದಾವತಿ ನೀರಿನಿಂದ ಜಲಾಭಿಷೇಕ



» **ಚಳ್ಳಕೆರೆ**

ರಾಷ್ಟ್ರದ ಶ್ರೇಷ್ಠ ಆರ್ಥಿಕ ತಜ್ಞ, ಮಾಜಿ ಪ್ರಧಾನಮಂತ್ರಿ ಮನಮೋಹನ್‌ಸಿಂಗ್‌ರವರಿಗೆ ಅಖಂಡ ಕರ್ನಾಟಕ ರೈತ ಸಂಘದ ವತಿಯಿಂದ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಪರಶುರಾಮಪುರದ ವೇದಾವತಿನದಿ ತೀರದ ಈಶ್ವರದೇವಸ್ಥಾನದ ಆವರಣದಲ್ಲಿ ಭಾನುವಾರ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ತಾಲ್ಲೂಕು ಅಧ್ಯಕ್ಷ ಎ.ನಾಗರಾಜ ಮಾತನಾಡಿ, ದೇಶದ ಪ್ರಧಾನಮಂತ್ರಿಯಾಗಿ ಎರಡು ಅವಧಿಗಳನ್ನು ಯಶಸ್ವಿಯಾಗಿ ಪೂರೈಸಿದ ಮನಮೋಹನಸಿಂಗ್ ತಮ್ಮದೇಯಾದ ಚಿಂತನೆಗಳ ಮೂಲಕ ದೇಶದ ಆರ್ಥಿಕ ಅಭಿವೃದ್ಧಿಗೆ ಶಕ್ತಿ ನೀಡಿದ್ದರು. ವಿಶೇಷವಾಗಿ ನೀರಾವರಿ ಸೌಲಭ್ಯದ ಬಗ್ಗೆ ಹೆಚ್ಚು ಗಮನಹರಿಸಿದ ನಾಯಕ. ಈ ಹಿನ್ನೆಲೆಯಲ್ಲಿ ಅವರ ಭಾವಚಿತ್ರಕ್ಕೆ ವೇದಾವತಿ ನದಿಯ ನೀರಿನಿಂದ ಅಭಿಷೇಕ ಮಾಡುವ ಮೂಲಕ ಶ್ರದ್ಧಾಂಜಲಿಯನ್ನು ಅರ್ಪಿಸಲಾಯಿತು ಎಂದರು. ಗ್ರಾಮದ ಮುಖಂಡರಾದ ಮಾದೇಶ, ವಿಜಯಕುಮಾರ್, ಗೌರವಾಧ್ಯಕ್ಷ ಕೃಷ್ಣಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

## ದೇವರೆಡ್ಡಿಹಳ್ಳಿ ಕೃಷಿಪತ್ತಿನ ಸಹಕಾರ ಬ್ಯಾಂಕ್ ಅಧ್ಯಕ್ಷರಾಗಿ ವಿಶ್ವನಾಥರೆಡ್ಡಿ ಆಯ್ಕೆ

» **ಚಳ್ಳಕೆರೆ**



ತಾಲ್ಲೂಕಿನ ತಳಕು ಹೋಬಳಿಯ ದೇವರೆಡ್ಡಿಹಳ್ಳಿ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಬ್ಯಾಂಕ್ ನಿಯಮಿತ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗಾಗಿ ಚುನಾವಣೆ ಭಾನುವಾರ ನಡೆದಿದ್ದು, ಚುನಾವಣಾಧಿಕಾರಿಗಳಾಗಿ ಬಷೀರ್‌ಸಾಬ್ ಕಾರ್ಯನಿರ್ವಹಿಸಿದ್ದು, ಸಿಇಒ ತಿಪ್ಪೇಸ್ವಾಮಿ ಚುನಾವಣ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು. ಪ್ರಾಥಮಿಕ ಕೃಷಿಪತ್ತಿನ ಸಹಕಾರಸಂಘದಅಧ್ಯಕ್ಷರಾಗಿವಿಶ್ವನಾಥರೆಡ್ಡಿ,ಉಪಾಧ್ಯಕ್ಷರಾಗಿ ಜೆ.ವಿಜಯಲಕ್ಷ್ಮಿ ಆಯ್ಕೆಯಾದರು. ನಿರ್ದೇಶಕರಾದ ಮಾತೃಶ್ರೀಎನ್.ಮಂಜುನಾಥ, ಜಿ.ವಿ.ನಾರಾಯಣರೆಡ್ಡಿ, ನಿರಂಜನ, ಗಂಗಣ್ಣ ಉಪಸ್ಥಿತರಿದ್ದರು.



**ಮಹಾರಾಷ್ಟ್ರದ ನೂತನ ಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವೀಸ್ ರವರನ್ನು ಶನಿವಾರ ನಾಗಪುರದ ಪ್ರವಾಸಿ ಮಂದಿರದಲ್ಲಿ ಮಾಜಿ ಕೇಂದ್ರ ಸಚಿವರಾದ ಡಾ.ಜಿಎಂಸಿದ್ದೇಶ್ವರ ರವರು ಭೇಟಿಯಾಗಿ ಶುಭ ಕೋರಿದರು. ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಯುವ ಮುಖಂಡರಾದ ಅನಿತ್ ಕುಮಾರ್ ಜಿ ಎಸ್, ಪೂನ ಕ್ಷೇತ್ರದ ಶಾಸಕರಾದ ರಾಹುಲ್ ಸುಭಾಷ್ ಕೂಲ್ ಮುಖಂಡರಾದ ವೈಭವ್ ರವರು ಉಪಸ್ಥಿತರಿದ್ದರು.**

**ಪ್ರಮುಖ ಸುದ್ದಿ**

### ಕುವೆಂಪುರವರ 120ನೇ ಜನ್ಮದಿನ

# ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಕುವೆಂಪು ಹೆಸರು ಅಜರಾಮರ

» **ಚಳ್ಳಕೆರೆ**

ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಎಂದೂಮರೆಯಲಾಗದ ಅಮೋಘ ಸಾಹಿತ್ಯ ಸೇವೆಯನ್ನು ನೀಡಿದ ರಾಷ್ಟ್ರಕವಿ ಕುಪ್ಪಳ್ಳಿವೆಂಕಪ್ಪಪುಟ್ಟಪ್ಪನವರ 120ನೇ ಜನ್ಮದಿನದಂದು ನಾವೆಲ್ಲರೂ ಸಾಹಿತ್ಯ ಕ್ಷೇತ್ರವನ್ನು ಮತ್ತಷ್ಟು ಗಟ್ಟಿಯಾಗಿ ಉಳಿಸಿ, ಬೆಳೆಸುವ ಸಂಕಲ್ಪ ಮಾಡೋಣವೆಂದು ನಿವೃತ್ತ ಕೆಎಎಸ್ ಅಧಿಕಾರಿ ಎನ್. ರಘುಮೂರ್ತಿ ತಿಳಿಸಿದರು. ಅವರು, ಭಾನುವಾರ ರೋಟರಿಬಾಲಭವನದಲ್ಲಿ ಕೊರ್ಲಕುಂಟೆ ಕನ್ನಡ ಸಾಂಸ್ಕೃತಿಕ ಸಂಸ್ಥೆ ಹಮ್ಮಿಕೊಂಡಿದ್ದ ಕುವೆಂಪುರವರ 120ನೇ ಜನ್ಮದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಚಳ್ಳಕೆರೆ ತಾಲ್ಲೂಕಿನ ವಿಶೇಷವೆಂದರೆ ಕುವೆಂಪುರವರ ಸಾಹಿತ್ಯದ ಕೊಡುಗೆಯಲ್ಲಿ ಅವರ ಗುರು ತಳುಕಿನ ವೆಂಕಣ್ಣಯ್ಯನವರ




ಸಾಹಿತ್ಯ ಸೇವೆಯೂ ಅಪಾರವಾಗಿದೆ. ಇಂತಹ ಸಾಹಿತ್ಯದ ಇತಿಹಾಸವನ್ನು ಹೊಂದಿರುವ ತಾಲ್ಲೂಕಿನಲ್ಲಿ ಕನ್ನಡ ಸಾಹಿತ್ಯವನ್ನು ಮತ್ತಷ್ಟು ಎತ್ತರಕ್ಕೆ ಬೆಳೆಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವೇದಿಕೆ ಅಧ್ಯಕ್ಷ, ಪತ್ರಕರ್ತ ಕೊರ್ಲಕುಂಟೆತಿಪ್ಪೇಸ್ವಾಮಿ ಮಾತನಾಡಿ, ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಎಂದೂ ಅಚ್ಚಳಿಯದ ಹೆಸರು ಕುವೆಂಪುರವರದ್ದು. ಇಂದಿಗೂ ಸಹ ಕುವೆಂಪು ಸಾಹಿತ್ಯ ಕೃಷಿಯ ಬಗ್ಗೆ ಜನರಲ್ಲಿ ಅಪಾರವಾದ ಮೆಚ್ಚುಗೆ ಇದೆ. ಕನ್ನಡ ಸಾಹಿತ್ಯ ಕ್ಷೇತ್ರ ಇರುವವರೆಗೂ ಕುವೆಂಪು ಹೆಸರು ಅಜರಾಮರವಾಗಿರುತ್ತದೆ ಎಂದರು.

ಬುದ್ಧವೇದಿಕೆ ಅಧ್ಯಕ್ಷ ಮೈತ್ರಿದ್ಯಾಮಣ್ಣ, ಕೆಪಿಸಿಸಿ ಕರಕುಶಲ ಪರಿಷತ್ ಅಧ್ಯಕ್ಷ ಆರ್.ಪ್ರಸನ್ನಕುಮಾರ್, ಭಿ.ಫರೀದ್‌ಖಾನ್, ಪಗಡಲಬಂಡೆನಾಗೇಂದ್ರಪ್ಪ, ಒನಕೆ ಓಬವ್ವ ವೇದಿಕೆ ಅಧ್ಯಕ್ಷ ಮಾರುತಿ, ಕವಿಯತ್ರಿ ಶಬ್ರಿನಮಹಮ್ಮದ್‌ಅಲಿ, ಎಚ್.ಲಂಕಪ್ಪ, ಬನಶ್ರೀಮಂಜುಳಮ್ಮ, ದುಗ್ಗಾವರತಿಪ್ಪೇಸ್ವಾಮಿ, ರವಿವರ್ಮ ಮುಂತಾದವರು ಉಪಸ್ಥಿತರಿದ್ದರು.

# ಫಾಸ್ಟ್ ನ್ಯೂಸ್



ದಾವಣಗೆರೆಇತ್ತೀಚೆಗೆ ನ್ಯೂ ಡೆಲ್ಲಿನಲ್ಲಿ ನಡೆದ ಬಹುಜನ ಸಾಹಿತ್ಯ ಅಕಾಡೆಮಿ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಸಾಹಿತ್ಯ ಸಮ್ಮೇಳನವು ಬಹಳ ವಿಜೃಂಭಣೆಯಿಂದ ಜರುಗಿತು.ಈ ಸಂದರ್ಭದಲ್ಲಿ ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ನಗರದ ತಾಲೂಕು ರಕ್ಷಣಾ ವೇದಿಕೆ (ಶಿವರಾಮೇಗೌಡ) ಬಣ ಅಧ್ಯಕ್ಷರಾದ ,ಎಂ .ಇಲಿಯಾಸ್ ಇವರಿಗೆ ಡಾಕ್ಟರ್ ಎ.ಪಿ.ಜೆ ಅಬ್ದುಲ್ ಕಲಾಂ ನ್ಯಾಷನಲ್ ಅವಾರ್ಡ್‌ನ್ನು , ಬಹುಜನ ಸಾಹಿತ್ಯ ಅಕಾಡೆಮಿ ರಾಷ್ಟ್ರೀಯ ಅಧ್ಯಕ್ಷರಾದ ನಲ್ಲರಾಧ ಕೃಷ್ಣನ ಇವರು ಗೌರವಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಮಹಿಳಾ ಅಧ್ಯಕ್ಷರಾದ ವೆಂಕಮ್ಮ ಹಿರಿಯ ಸಾಹಿತಿಗಳು ಹಾಗೂ ಗಣ್ಯ ಮಹನೀಯರು ಉಪಸ್ಥಿತರಿದ್ದರು.

## ಶರಣ ಸಾಹಿತ್ಯ ಸಮ್ಮೇಳನ ಪೋಸ್ಟರ್ ಬಿಡುಗಡೆ



» ಚಿತ್ರದುರ್ಗ
ಮುರುಘರಾಜೇಂದ್ರ ಬೃಹನ್ಮಠದ ಅನುಭವ ಮಂಟಪದಲ್ಲಿ ಜ.18 ಮತ್ತು 19 ರಂದು ನಡೆಯುವ ಅಖಿಲ ಭಾರತ 13 ನೇ ಶರಣ ಸಾಹಿತ್ಯ ಸಮ್ಮೇಳನದ ಪೋಸ್ಟರ್‌ನ್ನು ರಾಷ್ಟ್ರೀಯ ಹೆದ್ದಾರಿ-13 ರಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಶನಿವಾರ ಬಿಡುಗಡೆಗೊಳಿಸಲಾಯಿತು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ವೀರೇಶ್, ಕೆ.ಇ.ಬಿ.ಷಣ್ಮುಖಪ್ಪ,ಚಿತ್ರಕಲಾವಿದನಾಗರಾಜ್‌ಬೇದ್ರೆ, ಕೆ.ಪಿ.ಎಂ.ಗಣೇಶಯ್ಯ, ಕದಳಿ ವೇದಿಕೆ ಜಿಲ್ಲಾಧ್ಯಕ್ಷೆ ಪ್ರೊ.ಜಯಲಕ್ಷ್ಮಿ, ಪ್ರಧಾನ ಕಾರ್ಯದರ್ಶಿ ಶೋಭ ಮಲ್ಲಿಕಾರ್ಜುನ್, ಕಾರ್ಯದರ್ಶಿ ಡಾ.ಮಂಜುಳ, ಲೋಕೇಶ್ ಬಿ. ಇನ್ನು ಅನೇಕರು ಈ ಸಂದರ್ಭದಲ್ಲಿದ್ದರು.

## ಪುರುಷರ ವಾಲಿಬಾಲ್ ಪಂದ್ಯಾವಳಿಯಲ್ಲಿ ಹೊಸದುರ್ಗ ಪದವಿ ಕಾಲೇಜು ಪ್ರಥಮ



» ಹೊಸದುರ್ಗ
ದಾವಣಗೆರೆ ವಿಶ್ವವಿದ್ಯಾನಿಲಯದ 2024-25 ನೇ ಸಾಲಿನ ಅಂತರ್ ಕಾಲೇಜು ಪುರುಷರ ವಾಲಿಬಾಲ್ ಪಂದ್ಯಾವಳಿ ಹಾಗೂ ಪುರುಷ ಮತ್ತು ಮಹಿಳೆಯರ ವಿಶ್ವವಿದ್ಯಾನಿಲಯ ತಂಡದ ಆಯ್ಕೆಯು ಚನ್ನಗಿರಿ ತಾಲೂಕು ಸಂತೇಬೆನ್ನೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದಿದ್ದು, ಪಂದ್ಯಾವಳಿಯಲ್ಲಿ ಪುರುಷರ ಒಟ್ಟು 24 ತಂಡಗಳು ಭಾಗವಹಿಸಿದ್ದು ಅದರಲ್ಲಿ ಹೊಸದುರ್ಗ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತಂಡದವರು ಪ್ರಥಮ ಸ್ಥಾನವನ್ನು ಗಳಿಸಿರುತ್ತಾರೆ. ಇವರು ಕಳೆದ ಸಾಲಿನಲ್ಲಿಯೂ ಸಹ ಪ್ರಥಮ ಸ್ಥಾನವನ್ನು ಗಳಿಸಿದ್ದು ಶಾಸಕರು ಹಾಗೂ ಕಾಲೇಜಿನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಬಿ ಜಿ ಗೋವಿಂದಪ್ಪ ಹಾಗೂ ಸಮಿತಿಯ ಎಲ್ಲಾ ಸದಸ್ಯರು, ಮತ್ತು ಪ್ರಾಚಾರ್ಯರಾದ ಡಾ. ಅಶ್ವಥ್ ಯಾದವ್ ಜಿ ಎಸ್, ಐಕ್ಯೂಎಸ್‌ಸಿ ಸಂಚಾಲಕರಾದ ಸತೀಶ್ ಎಂ. ಕ್ರೀಡಾ ಸಂಚಾಲಕ ಶೈಲೇಂದ್ರ ಎಸ್ ವಿ, ದೈಹಿಕ ಶಿಕ್ಷಣ ನಿರ್ದೇಶಕ ಸತೀಶ್ ಜಿ ಆರ್, ಜೊತೆಗೆ ಕಾಲೇಜಿನ ಎಲ್ಲಾ ಸಿಬ್ಬಂದಿ ವರ್ಗದವರು ವಿಜೇತರಿಗೆ ಅಭಿನಂದಿಸಿದ್ದಾರೆ.

## ಮುದ್ದಣ ಜಯಂತಿ

» ಚಿತ್ರದುರ್ಗ
ಶಿವಶರಣರಾದ ಒಕ್ಕಲಿಗ ಮುದ್ದಣ್ಣನವರ ಜಯಂತಿಯನ್ನು ಡಿಸೆಂಬರ್ 30ರ ಸೋಮವಾರ ಬೆಳಗ್ಗೆ 8:30 ಗಂಟೆಯಿಂದ ಚಿತ್ರದುರ್ಗದ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾ ವಿಶ್ರಾಂತಿ ತಾಣದ ಮುಂಭಾಗದಲ್ಲಿ ಆಯೋಜಿಸಲಾಗಿದೆ.ಬೃಹನ್ಮಠ ಹಾಗೂ ಎಸ್ ಜೆ ಎಂ ವಿದ್ಯಾಪೀಠದ ಆಡಳಿತ ಮಂಡಳಿಯ ಅಧ್ಯಕ್ಷರಾದ ಶಿವಯೋಗಿ.ಸಿ. ಕಳಸದ ಅವರ ಅಧ್ಯಕ್ಷತೆಯಲ್ಲಿ ,ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳವರ ಸಾನಿಧ್ಯದಲ್ಲಿ, ಇನ್ನುಳಿದ ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ನಡೆಯಲಿದೆ.

# ಜ.18ಕ್ಕೆ ಶರಣ ಸಾಹಿತ್ಯ ಪರಿಷತ್ ಸಮ್ಮೇಳನ

» ಚಿತ್ರದುರ್ಗ
ವಚನ ಸಾಹಿತ್ಯದ ಸಾರವನ್ನ ಪ್ರಚುರ ಪಡಿಸಲು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ 13ನೇ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಸಮ್ಮೇಳನವನ್ನು ಐತಿಹಾಸಿಕ ಚಿತ್ರದುರ್ಗದ ನಗರದಲ್ಲಿ ನಡೆಸಲುದ್ದೇಶಿಸಿರುವುದಕ್ಕೆ ನಮ್ಮ ಸಹಕಾರ ಬೆಂಬಲ ಮತ್ತು ಶ್ರೀ ಮುರುಘಾಮಠ ಇದರಲ್ಲಿ ಸಂಪೂರ್ಣ ತೊಡಗಿಸಿಕೊಳ್ಳುತ್ತದೆ ಎಂದು ಶ್ರೀಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್ ಜೆ ಎಂ ವಿದ್ಯಾಪೀಠ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳವರು ನುಡಿದರು.

ಜನವರಿ 18 ಮತ್ತು 19ರಂದು ಇದೇ ಅನುಭವ ಮಂಟಪದಲ್ಲಿ ನಡೆಯಲಿರುವ ಸಮ್ಮೇಳನದ ಅಂಗವಾಗಿ ಶ್ರೀಗಳವರು ಇಲ್ಲಿನ ಅನುಭವ ಮಂಟಪದಲ್ಲಿ ಶುಕ್ರವಾರ ಸಂಜೆ ಏರ್ಪಡಿಸಿದ್ದ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಹಾಗೂ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಸಂಯುಕ್ತಾಶ್ರಯದಲ್ಲಿ ನಡೆಯಲಿರುವ 13ನೇ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯ ನೇತೃತ್ವ ವಹಿಸಿ ಮಾತನಾಡಿ ಈ ನಾಡಿನಲ್ಲಿ ಇಬ್ಬರು ಮಠಾಧೀಶರಾದ ಚಿತ್ರದುರ್ಗದ ಶ್ರೀ ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗಳ ಶಿಕ್ಷಣ ಮತ್ತು ದಾಸೋಹ ಉತ್ತೇಜನಕ್ಕೆ ಅವರು ನೀಡಿದ ಕೊಡುಗೆ ಹಾಗೂ ಇನ್ನೋರ್ವದಾದ ನಾಡಿನ ಸುತ್ತೂರಿನ ಶಿವರಾತ್ರಿದೇಶಿಕೇಂದ್ರ ಮಹಾಸ್ವಾಮಿಜಿಯವರು ನೀಡಿದ ದಾಸೋಹದ ಕಲ್ಪನೆ ಅದರೊಂದಿಗೆ ಶರಣ ಸಾಹಿತ್ಯಕ್ಕೆ ನೀಡಿದಂತಹ ಕೊಡುಗೆ ಅದರ ಉದ್ದೇಶವನ್ನು ಹೊಂದಿರುವಂತಹ ಈ ಶರಣ ಸಾಹಿತ್ಯ ಪರಿಷತ್ ವಚನ ಸಾಹಿತ್ಯವನ್ನು ನಾಡಿನ ಉದ್ದಗಲಕ್ಕೂ ಪ್ರಸಾರ ಮಾಡುವ ಉದ್ದೇಶದಿಂದ ಸ್ಥಾಪನೆಯಾಗಿದೆ. ಅದೀಗ ತಾನು ಏರ್ಪಡಿಸಿರುವ ಹದಿಮೂರನೇ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನ ಜನಮನ ತಲುಪಲಿ ಎಂಬ ಆಶಯ ವ್ಯಕ್ತಪಡಿಸಿದರು.



ಸಭೆಯ ಸಮ್ಮುಖ ವಹಿಸಿದ್ದ ದಾವಣಗೆರೆ ವಿರಕ್ತಮಠದ ಡಾ. ಬಸವಪ್ರಭು ಮಹಾಸ್ವಾಮಿಗಳು ಮಾತನಾಡಿ ಐತಿಹಾಸಿಕ ಚಿತ್ರದುರ್ಗದಲ್ಲಿ ನಡೆಯುವಂತ ಈ ಸಮ್ಮೇಳನಕ್ಕೆ ಶ್ರೀಮಠ ಎಲ್ಲ ರೀತಿಯ ಸಹಕಾರವನ್ನು ನೀಡುತ್ತದೆ. ಅಲ್ಲದೆ ಈ ಸಮ್ಮೇಳನದಲ್ಲಿ ಲಿಂಗಾಯತ ಸ್ವತಂತ್ರ ಧರ್ಮದ ಮಾನ್ಯತೆಗಾಗಿ ಹೋರಾಟಕ್ಕೆ ಮತ್ತೆ ಚಾಲನೆ ನೀಡುವಂತಾಗಲಿ ಎಂಬ ಆಶಯ ವ್ಯಕ್ತಪಡಿಸಿದರು.

ಪೂರ್ವಭಾವಿ ಸಭೆಯಲ್ಲಿ ಪ್ರಾಸ್ತಾವಿಕ ನುಡಿಗಳನ್ನಾಡಿದ ಅಖಿಲ ಭಾರತ ಶರಣ ಸಾಹಿತ್ಯ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರೂ ನಿವೃತ್ತ ಜಿಲ್ಲಾಧಿಕಾರಿಗಳೂ ಆದ ಡಾ.ಸಿ. ಸೋಮಶೇಖರ್ ಅವರು ಮಾತನಾಡಿ ಶರಣರ ನುಡಿ ಆಚಾರ ವಿಚಾರಗಳನ್ನು ನಾಡಿನ ಜನತೆಯ ಮನೆ ಮನಗಳಿಗೆ ಮುಟ್ಟಬೇಕೆಂಬ ಸುದ್ದೇಶದಿಂದ ಈ ಶರಣ ಸಾಹಿತ್ಯ ಪರಿಷತ್ತನ್ನು ಪ್ರಾರಂಭಿಸಲಾಯಿತು. ಶರಣ ಸಾಹಿತ್ಯ ಪರಿಷತ್ತಿನ ಈ ಹಿಂದಿನ ಹಲವಾರು ಸಮ್ಮೇಳನಗಳಲ್ಲಿ ನಾಡಿನ ಹೆಸರಾಂತ ಚಿಂತಕರಾದ ಚಿದಾನಂದಮೂರ್ತಿ, ಎಂ.ಎಂ. ಕಲ್ಬುರ್ಗಿ ,ಗುಂಜಾಳ್, ಸಿದ್ದಲಿಂಗಯ್ಯ ಇನ್ನು ಮುಂತಾದವರ ಅಧ್ಯಕ್ಷತೆಯಲ್ಲಿ ಅರ್ಥಪೂರ್ಣವಾಗಿ ನಡೆಯಲ್ಪಟ್ಟಿವೆ. ಅದರ ಮುಂದುವರೆದ ಭಾಗವಾಗಿ ಐತಿಹಾಸಿಕ ಮಹತ್ವದ ಚಿತ್ರದುರ್ಗದ ನಗರದಲ್ಲಿ 13ನೇ ಸಮ್ಮೇಳನವನ್ನು ನಡೆಸುವಂತಹ ಉದ್ದೇಶವನ್ನು ಕೈಗೊಂಡಿದ್ದೇವೆ ಎಂದರು.

ಈ ಸಮ್ಮೇಳನದಲ್ಲಿ ವಚನ ಸಾಹಿತ್ಯದಲ್ಲಿ ಸ್ತ್ರೀ ಸಂವೇದನೆ ,ವೈಚಾರಿಕತೆ ಹಾಗೂ ಪ್ರಗತಿಪರ ಚಿಂತನ ಗೋಷ್ಠಿಗಳು ಮತ್ತು ಯುವ ಜನಾಂಗವನ್ನು ಶರಣ ಸಾಹಿತ್ಯದ ಕಡೆಗೆ ಕೊಂಡೊಯ್ಯುವಂತ ಗೋಷ್ಠಿ ಹಾಗೂ ಶರಣರ ವಿಚಾರಗಳ ನಾಟಕ ಮುಂತಾದವುಗಳನ್ನು ನಡೆಸುವ ಉದ್ದೇಶ ಸಮ್ಮೇಳನ ಹೊಂದಿದೆ ಎಂದು ತಿಳಿಸಿದರು. ಸಮ್ಮೇಳನಕ್ಕೆ ಮುರುಘಾಮಠದ ಬೆಂಬಲ ಮತ್ತು ಪ್ರೋತ್ಸಾಹ ನೀಡುತ್ತಿರುವುದು ತುಂಬಾ ಸಂತೋಷದ ವಿಚಾರವಾಗಿದೆ ಎಂದು ನುಡಿದರು.

ಇತಿಹಾಸಿಕ ಸಂಶೋಧಕರಾದ ಡಾ. ಬಿ ರಾಜಶೇಖರಪ್ಪನವರು ಮಾತನಾಡಿ ಸಮ್ಮೇಳನದಲ್ಲಿ ಶರಣರ ವಿಚಾರಧಾರೆಗಳ ಮೇಲೆಬೆಳಕುಚೆಲ್ಲುವಸ್ಮರಣಸಂಚಿಕೆಯನ್ನು ಹೊರ ತರುವಂತ ಜವಾಬ್ದಾರಿಯನ್ನು ವಹಿಸಿದ್ದು ಅದನ್ನು ನಾನು ಮಾಡುತ್ತೇನೆ ಎಂದರು. ಚಿಂತಕರಾದ ಡಾ. ಬಸವರಾಜ್ ನೇಲ್ಲಿಸರ, ನಾಗರಾಜ್ ಸಂಗವ್ ,ಆನಂದಕುಮಾರ್, ನಗರಭೆ ಮಾಜಿ ಅಧ್ಯಕ್ಷರಾದ ದೇವಿಕುಮಾರಿ ಮತ್ತಿತರರು ತಮ್ಮ ಸಲಹೆ ನೀಡಿದರು. ಸಮ್ಮುಖವನ್ನು ಗುರುಮಟ್ಟಕಲ್ ನ ಶಾಂತವೀರ ಗುರುಮುರುಘರಾಜ ೇಂದ್ರಸ್ವಾಮಿಗಳು ,ತುಮಕೂರಿನ ಬಸವ ಮಹಲಿಂಗಸ್ವಾಮಿಗಳು, ಶಿರಸಿ ಹಾಗೂ ಚಿದ್ರಳ್ಳಿಯ ಮಲ್ಲಿಕಾರ್ಜುನ ಸ್ವಾಮಿಗಳು ನಿಪ್ಪಾಣಿಯ ಬಸವ ಮಲ್ಲಿಕಾರ್ಜುನ ಮಹಾಸ್ವಾಮಿಗಳು ಮುರುಘರಾಜೇಂದ್ರ ಮಠದ ಮುರುಘೇಂದ್ರ ಶ್ರೀಗಳವರು ವಹಿಸಿದ್ದರು.

ವೇದಿಕೆಯಲ್ಲಿ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಶರಣ ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳಾದ ಅಶೋಕ್ ಮಳಲಿ, ಪ್ರಕಾಶ ಅಂಗಡಿ ,ಸಿದ್ದಪ್ಪ ಹೊಟ್ಟಿ ,ಜಗನ್ನಾಥಪ್ಪ ಪನಸಾಲಿ, ಸೋಮಶೇಖರ್ ಗಾಂಜ, ಮಲ್ಲಿ

ಕಾರ್ಜುನ ಕಲಬುರ್ಗಿ,ಪುಷ್ಪ ಸುರೇಶ್ ಬಾಬು,ಎಸ್ ಷಣ್ಮುಖಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಪೂರ್ವ ಭಾವಿ ಸಭೆಗೆ ವಿವಿಧ ಸಮಾಜದ, ಧರ್ಮದ ಮುಖಂಡರುಗ ಳು,ಪದಾಧಿಕಾರಿಗಳು, ಬಸವ ಕೇಂದ್ರಗಳ ಪದಾಧಿಕಾರಿಗಳು,ಬಸವಸಂಘನೆಗಳವರು, ಶರಣ ತತ್ವಾಭಿಮಾನಿಗಳು, ನಗರ,ಪಟ್ಟಣ, ವಿವಿಧ ಗ್ರಾಮಗಳ ಪ್ರಮುಖರು, ಎಸ್ ಜೆ ಎಂ ವಿದ್ಯಾಪೀಠದ ಶಾಲಾ ಕಾಲೇಜುಗಳ ಸಿಬ್ಬಂದಿ ,ಚಿತ್ರದುರ್ಗ ನಗರದ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ಸಾಹಿತಿಗಳು, ಕವಿಗಳು ವಿವಿಧ ಸಂಘ ಸಂಸ್ಥೆಗಳವರು ಕಲಾವಿದರುಗಳು ಭಾಗವಹಿಸಿದ್ದರು.

ಕೋಕಿಲ ಎಂ.ಜೆ ವಚನ ಪ್ರಾರ್ಥನೆ ನಡೆಸಿದರು, ಶಸಾಪ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಡಾ. ಕೆಂ .ಎಂ ವೀರೇಶ್ ಸ್ವಾಗತಿಸಿದರು ,ಹುರುಳಿ ಬಸವರಾಜ ಕಾರ್ಯಕ್ರಮ ನಿರೂಪಿಸಿದರೆ, ಕೆ.ಪಿ.ಎಂ ಗಣೇಶಯ್ಯ. ವಂದಿಸಿದರು

# ಬಹುಮುಖಿ ಸಂಸ್ಕೃತಿಯ ಸುಂದರ ತಾಣ ಭಾರತ ಸದಾ ಶಾಂತಿಯ ತೋಟವಾಗಿರಬೇಕು: ಸ್ವಾಮೀಜಿ

» ಚಿತ್ರದುರ್ಗ
ವಿವಿಧತೆಯಲ್ಲಿ ಏಕತೆ ಹೊಂದಿದ ,ಬಹುಮುಖಿ ಸಂಸ್ಕೃತಿಯ ಸುಂದರ ತಾಣ ಭಾರತ. ಅದು ಸದಾ ಶಾಂತಿಯ ತೋಟವಾಗಿರಬೇಕೆಂಬ ವಿಶ್ವಮಾನವತೆಯ , ಮಾನವೀಯ ಪ್ರೀತಿಯ ಹಾಗೂ ಬಂಧುತ್ವದ ಸಂದೇಶ ಕೊಟ್ಟು ಸದಾ ಜನಮಾನಸದಲ್ಲಿ ನಿಲ್ಲುವಂತ ವ್ಯಕ್ತಿತ್ವ ರಾಷ್ಟ್ರಕವಿ ಕುವೆಂಪು ಅವರದಾಗಿದೆ ಎಂದು ದಾವಣಗೆರೆ ವಿರಕ್ತ ಮಠದ ಬಸವ ಪ್ರಭು ಮಹಾಸ್ವಾಮಿಗಳವರು ಅಭಿಮಾನದಿಂದ ನುಡಿದರು.

ಅವರು ಚಿತ್ರದುರ್ಗದ ಶ್ರೀ ಜಗದ್ಗುರು ಮುರುಗರಾಜೇಂದ್ರ ಬೃಹನ್ಮಠದ ಮುರುಗಿಯ ಶಾಂತವೀರ ಮಹಾಸ್ವಾಮಿಗಳವರ ಲೀಲಾ ವಿಶ್ರಾಂತಿ ತಾಣದ ಸಾನಿಧ್ಯದಲ್ಲಿ ಏರ್ಪಡಿಸಿದ್ದ ರಾಷ್ಟ್ರಕವಿ ಕುವೆಂಪು ಅವರ ಜಯಂತ್ಯುತ್ಸವದ ಸಾನಿಧ್ಯವಸಿ ಮಾತನಾಡುತ್ತಾ ,ವ್ಯಕ್ತಿ ಜಾತಿಯಿಂದ ದೊಡ್ಡವನಾಗದೆ ತನ್ನ ಕಾರ್ಯ ಸಾಧನೆಯಿಂದ ಜಗಕೆ ಉತ್ತಮ ಕೊಡುಗೆ ನೀಡುವ ಮೂಲಕ ಎತ್ತರಕ್ಕೇರಬೇಕಿದೆ. ಹುಟ್ಟುವಾಗ ವಿಶ್ವಮಾನವತೆ ಹೊಂದುವ ನಾವು ಬೆಳೆದು ಶಿಕ್ಷಣ,ಜ್ಞಾನ ಹೊಂದುತ್ತಾ ಜಾತಿ ಸಂಕೋಲೆಗೊಳಗಾಗುತ್ತಿರುವುದು ವಿಷಾದಕರ ಎಂದು ಹೇಳಿದ ಶ್ರೀಗಳು ವಿಶ್ವಮಾನವತೆಯ ದೂರದೃಷ್ಟಿ ಹೊಂದಿದ್ದ ಬಸವಣ್ಣನವರು ಅಸಮಾನತೆ, ಲಿಂಗತಾರತಮ್ಯ ,ಮೂಢನಂಬಿಕೆ ಅವೈಜ್ಞಾನಿಕ ಆಚರಣೆಗಳೆಂಬ ಕತ್ತಲೆಯಿಂದ ಬಿಡಿಸಲು ಸೂರ್ಯನೋಪಾದಿಯಲ್ಲಿ ಬಸವಣ್ಣ ಬಂದರು. ಅಂತಹ ವಿಶ್ವ ಮಾನವತೆಯ ತತ್ವ ಹೊಂದಿದ್ದ ಬಸವಣ್ಣನವರ ಪರಿಚಯ ಮುಂಚಿತವಾಗಿ ಆಗಿದ್ದರೆ ನಾನು ಬಸವ ದರ್ಶನಮ್ ನ್ನೂ ರಚಿಸುತ್ತಿದ್ದೆ ಎಂಬುದಾಗಿ ಹೇಳಿದ ಮಾತನ್ನು ಶ್ರೀಗಳವರು ಉದಾರಿಸಿದರು.



ಹಾಗೆಯೇ ಬುದ್ಧ ಬಸವರ ನಂತರ ಅತಿ ಹೆಚ್ಚು ಸಮ ಸಮಾಜದ ನಿರ್ಮಾಣದ ಕನಸನ್ನು ಕಂಡವರು ಕುವೆಂಪು ಅವರು. ಬಸವಣ್ಣನವರ ಮೇಲೆ ಅಗಾಧ ಪ್ರೇಮ ಹೊಂದಿದ್ದ ಅವರು ಹೆಚ್ಚಾಗಿ ಅವರ ಪ್ರಭಾವಕ್ಕೆ ಒಳಗಾಗಿದ್ದಾಗಿ ಹೇಳಿಕೊಂಡಿದ್ದಾರೆ.

ಹಾಗಾಗಿ ಸರ್ವರೂ ಸರ್ವೋದಯ, ವಿಶ್ವಮಾನವ ತತ್ವ ಅಳವಡಿಸಿಕೊಂಡು ಆ ಮೂಲಕ ದ್ವೇಷ ಅಳಿಸಿ ಪ್ರೀತಿ, ಭ್ರಾತೃತ್ವ ಹೊಂದುವುದಕ್ಕಾಗಿ ಅವರು ಹೇಳಿದ್ದು "ಓ ನನ್ನ ಚೇತನ ಹಾಗೂ ನೀ ಅನಿಕೇತನ" ಎಂದು. ಹೀಗಾಗಿ ಅವರಿಗೆ ಅವರ ಯುಗದ ಕವಿ, ಜಗದ ಕವಿ, ರಾಷ್ಟ್ರಕವಿ ಎಂಬೆಲ್ಲಾ ಬಿರುದುಗಳು ಪ್ರಾಪ್ತವಾಗಿವೆ. ಅವರ ಬಹುಮುಖ ವ್ಯಕ್ತಿತ್ವಕ್ಕಾಗಿ ಮೊದಲ ಜ್ಞಾನಪೀಠ ಪ್ರಶಸ್ತಿ ಸಂದಾಯವಾಗಿದೆ. ಅವರ ರಾಷ್ಟ್ರಗೀತೆಯ ಪ್ರತಿಯೊಂದು ಸಾಲುಗಳು ಅರ್ಥಪೂರ್ಣವಾಗಿದ್ದು ಅವುಗಳ ಅನುಷ್ಠಾನ ಅನುಸಂಧಾನ ನಮ್ಮದಾಗಬೇಕೆಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ನಿಪ್ಪಾಣಿಯ ಬಸವ ಮಲ್ಲಿಕಾರ್ಜುನ ಸ್ವಾಮಿಗಳು, ಆಯುರ್ವೇದ ವೈದ್ಯ ಡಾ. ನವೀನ್ ಸಜ್ಜನ್, ಕವಿ ಹಾಗೂ ಕಂಪ್ಯೂಟರ್ ಮಾಹಿತಿ ತರಬೇತುದಾರ ವಿನಯ್ ಕುಮಾರ್ ಸೇರಿದಂತೆ,ವಿವಿಧ ಗ್ರಾಮದ ಜನರು,ಎಸ್.ಜೆ. ಎಂ ವಿದ್ಯಾಪೀಠದ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಸಮಾರಂಭದ ಆರಂಭಕ್ಕೆ ವಿದ್ಯಾರ್ಥಿಗಳು ವಚನ, ನಾಡಗೀತೆ ಪ್ರಸ್ತುತಪಡಿಸಿದರು. ಎಸ್. ಜೆ.ಎಂ. ವಿದ್ಯಾಪೀಠದ ಶೈಕ್ಷಣಿಕ ವಿಭಾಗದ ಮುಖ್ಯಸ್ಥರಾದ ಎನ್. ಚೆಲುವರಾಜು ಸ್ವಾಗತಿಸಿದರು .ಅಧ್ಯಾಪಕ ನವೀನ್ ಮಸ್ಕಲ್ ಕಾರ್ಯಕ್ರಮ ನಿರ್ವಹಿಸಿದರು ಮಹಾಂತೇಶ್ ನಿಟುವಳ್ಳಿ ಶರಣು ಸಮರ್ಪಣೆ ಮಾಡಿದರು.

## ವಿಶ್ವಮಾನವ ದಿನಾಚರಣೆ: ಸರಳ ಆಚರಣೆ



» ಚಿತ್ರದುರ್ಗ
ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಾನುವಾರ ವಿಶ್ವಮಾನವ ದಿನಾಚರಣೆಯನ್ನು ಸರಳ ಹಾಗೂ ಸಾಂಕೇತಿಕವಾಗಿ ಆಚರಿಸಲಾಯಿತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನದ ಅಂಗವಾಗಿ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮವನ್ನು ಮಾಜಿ ಪ್ರಧಾನಿಗಳಾದ ಡಾ.ಮನಮೋಹನ್ ಸಿಂಗ್ ಅವರ ನಿಧನದ ಶೋಕಾಚರಣೆ ಹಿನ್ನಲೆಯಲ್ಲಿ ಸರಳವಾಗಿ ಹಮ್ಮಿಕೊಳ್ಳಲಾಗಿತ್ತು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ರಾಷ್ಟ್ರಕವಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ್, ಶಾಲಾ ಶಿಕ್ಷಣ ಇಲಾಖೆಯ ಕನ್ನಡ ವಿಷಯ ಪರಿವೀಕ್ಷಕ ಕೆ.ಶಿವಣ್ಣ ಸೇರಿದಂತೆ ಮತ್ತಿತರರು ಇದ್ದರು.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಚಿತ್ರದುರ್ಗ: 2024-25ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯ ಪ್ರವೇಶಾತಿಯನ್ನು 2025ರ ಜನವರಿ 10ರವರೆಗೆ ವಿಸ್ತರಿಸಲಾಗಿದೆ. ಪದವಿ ಮಟ್ಟದ ಕೋರ್ಸ್, ವೃತ್ತಿಪರ ಮತ್ತು ಸ್ನಾತಕೋತ್ತರ ಕೋರ್ಸಿನ ಸಾಮಾನ್ಯ ವಿದ್ಯಾರ್ಥಿಗಳು ಮಾತ್ರ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶ https://shp.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಬೇಡಿಕೆ ಈಡೇರಿಕೆ ಆಗ್ರಹಿಸಿ ಸಾರಿಗೆ ನೌಕರರ ಪ್ರತಿಭಟನೆ

» ಚಿತ್ರದುರ್ಗ
ಕೆ.ಎಸ್.ಆರ್.ಟಿ.ಸಿ. ನೌಕರರ ಬೇಡಿಕೆಗಳನ್ನು ಈಡೇರಿಸದೆ ರಾಜ್ಯ ಸರ್ಕಾರ ಸತಾಯಿಸುತ್ತಿರುವುದನ್ನು ವಿರೋಧಿಸಿ ಡಿ.31 ರಿಂದ ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸ್ಟಾಫ್ ಅಂಡ್ ವರ್ಕರ್ಸ್ ಯೂನಿಯನ್ ಚಿತ್ರದುರ್ಗ ವಿಭಾಗದ ಗೌರವಾಧ್ಯಕ್ಷ ಕಾಂ.ಜಿ.ಸಿ.ಸುರೇಶ್‌ಬಾಬು ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯ ಸರ್ಕಾರ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಕೆ.ಎಸ್.ಆರ್.ಟಿ.ಸಿ. ಬಸ್‌ಗಳಲ್ಲಿಉಚಿತಪ್ರಯಾಣಕಲ್ಪಿಸಿರುವುದು ಸ್ವಾಗತಾರ್ಹ. ರಾಜ್ಯದ ನಾಲ್ಕು ನಿಗಮಗಳ ಚಾಲಕರು ಹಾಗೂ ನಿರ್ವಾಹಕರ ಶ್ರಮದಿಂದ ಪ್ರಯಾಣಿಕರು ಸುರಕ್ಷಿತವಾಗಿ ಬಸ್‌ಗಳಲ್ಲಿ ಸಂಚರಿಸುತ್ತಿದ್ದಾರೆ. ಬೆಳಗಾವಿಯಲ್ಲಿ ನಡೆದ ಅಧಿವೇಶನದಲ್ಲಿ ಸಾರಿಗೆ ನೌಕರರ ಬೇಡಿಕೆಗಳನ್ನು ಚರ್ಚಿಸಿ ಈಡೇರಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಆದರೆ ಅಲ್ಲಿ ನಮ್ಮ ಮನವಿ ಪತ್ರವನ್ನು ಪಡೆಯಲು ಸಿ.ಎಂ.ಬರಲಿಲ್ಲ. ಅವರ ಬದಲಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್‌ಗುಂಡೂರಾವ್ ಸ್ವೀಕರಿಸಿ ಸಾರಿಗೆ ಸಚಿವರ ಗಮನ ಸೆಳೆಯುವ ಭರವಸೆ ನೀಡಿದರೆ ವಿನಃ ಇದರುವರೆವಿಗೂ ಯಾವುದೂ ಈಡೇರಿಲ್ಲದ ಕಾರಣ ನೌಕರರು ಮುಷ್ಕರಕ್ಕೆ ಮುಂದಾಗಿರುವುದರಿಂದ ಸಾರ್ವಜನಿಕರು ಸಹಕರಿಸುವಂತೆಕಾಂ.ಜಿ.ಸಿ.ಸುರೇಶ್‌ಬಾಬು ಮನವಿ ಮಾಡಿದರು.



ಕೆ.ಎಸ್.ಆರ್.ಟಿ.ಸಿ. ಸ್ಟಾಫ್ ಅಂಡ್ ವರ್ಕರ್ಸ್ ಯೂನಿಯನ್ ಕಾರ್ಯಾಧ್ಯಕ್ಷ ರಹೀಂಸಾಬ್ ಮಾತನಾಡಿ 38 ತಿಂಗಳ ವೇತನ ಬಾಕಿ ಕೂಡಲೆ ಪಾವತಿಸಬೇಕು. ದಿನಾಂಕ: 1-1-2024 ರಿಂದ ವೇತನ ಪರಿಷ್ಕರಣೆ ಹಾಗೂ ನಿವೃತ್ತ ನೌಕರರಿಗೆ ದಿನಾಂಕ : 27-6-2024 ರ ಸುತ್ತೋಲೆ ಹಣವನ್ನುಕೂಡಲೆಬಿಡುಗಡೆಗೊಳಿಸುವಂತೆ ಹಲವಾರು ಬಾರಿ ಮನವಿ ಸಲ್ಲಿಸಿದ್ದೇವೆ. ರಾಜ್ಯ ಸರ್ಕಾರದಿಂದ ಯಾವುದೆ ಸ್ಪಂದನೆಯಿಲ್ಲ. ಬೊಮ್ಮಯಿ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಶೇ.15 ರಷ್ಟು ವೇತನಹೆಚ್ಚಳಮಾಡಿದ್ದನ್ನುಇದುವರೆವಿಗೂ ನೀಡಿಲ್ಲ. ಹಾಗಾಗಿ ಅನಿರ್ಧಿಷ್ಟಾವಧಿ ಧರಣಿಗೆ ಮುಂದಾಗಿದ್ದೇವೆ. ಪ್ರಯಾಣಿಕರಿಗೆ ತೊಂದರೆಯಾಗುತ್ತದೆ. ಸಹಕರಿಸುವಂತೆ ವಿನಂತಿಸಿದರು.ಪತ್ರಿಕಾಗೋಷ್ಠಿಯಲ್ಲಿ ಕೆ.ಎಸ್.ಆರ್.ಟಿ.ಸಿ. ಸ್ಟಾಫ್ ಅಂಡ್ ವರ್ಕರ್ಸ್ ಯೂನಿಯನ್ ಪ್ರಧಾನ ಕಾರ್ಯದರ್ಶಿ ಟಿ.ಅಶೋಕ್, ಉಪಾಧ್ಯಕ್ಷ ಟಿ.ಆರ್. ಉಮಾಪತಿ, ಸಂಘಟನಾ ಕಾರ್ಯದರ್ಶಿ ಕಾಂ.ಈ.ಸತ್ಯಮೂರ್ತಿ ಇನ್ನು ಅನೇಕರು ಹಾಜರಿದ್ದರು.

ಫಾಸ್ಟ್ ನ್ಯೂಸ್

## ಡಾ. ಪುನೀತ್ ಜನಸೇವಾ ಟ್ರಸ್ಟ್ ವತಿಯಿಂದ ಕ್ಯಾಲೆಂಡರ್ ಬಿಡುಗಡೆ



» ಹೊಸದುರ್ಗ

ತಾಲೂಕಿನ ಕಂಚಿನಗರದ ಡಾ ಪುನೀತ್ ರಾಜಕುಮಾರ್ ಜನಸೇವಾ ಟ್ರಸ್ಟ್ ವತಿಯಿಂದ ಶ್ರೀ ಷಡಕ್ಷರ ಮಠದ ಪೀಠಾಧಿಪತಿಗಳಾದ ಶ್ರೀ ರುದ್ರಮುನಿ ಸ್ವಾಮೀಜಿ ರವರು 2025 ನೇ ಸಾಲಿನ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಈ ವೇಳೆ ಮಾತನಾಡಿದ ಶ್ರೀಗಳು ಟ್ರಸ್ಟ್ ಇಂದಿಗೆ ಪ್ರಾರಂಭವಾಗಿ 3 ವರ್ಷವಾಗಿದ್ದು ಸಮಾಜದಲ್ಲಿ ಒಳ್ಳೆಯ ಕಾರ್ಯಕ್ರಮ ಗಳನ್ನು ಆಯೋಜಿಸಲಾಗಿದೆ. ಹಾಗೂ ಸಮಾಜ ಮುಖಿ ಕೆಲಸದಲ್ಲಿ ತೊಡಗಿ ಕೊಂಡಿದ್ದು ಮುಂದೆಯೂ ಇಂತಹ ಕಾರ್ಯಗಳನ್ನು ಮುಂದುವರಿಸಿಕೊಂಡು ಹೋಗುವ ಕಾರ್ಯ ಮಾಡಲಿ ಎಂದು ಹಾರೈಸಿದರು.ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಅಧ್ಯಕ್ಷ ಎಸ್ ಜಗದೀಶ್ ಕಂಚಿನಗರ ಮಾತನಾಡಿ ಶ್ರೀಗಳ ಆಶೀರ್ವಾದದಂತೆ ಸಮಾಜದ ಏಳಿಗೆ ಗೋಸ್ಕರ ಪುನೀತ್ ರವರು ಕಾಣದ ಹಾಗೆ ಸೇವಾ ಕಾರ್ಯದಲ್ಲಿ ತೊಡಗಿದರೋ ಹಾಗೆ ನಮ್ಮ ಸಂಘವು ಕಾಣದ ಕೈಗಳ ರೀತಿ ಸಮಾಜದ ಏಳಿಗೆಗೋಸ್ಕರ ದುಡಿಯುತ್ತೇವೆ ಎಂದು ಭರವಸೆ ನೀಡಿದರು. ಕಾರ್ಯಕ್ರಮ ದಲ್ಲಿ ಪತ್ರಕರ್ತ ತಿಪಟೂರು ಕಿರಣ್, ಸಿದ್ದೇಶ್ವರ್, ಮಿಥುನ್ ಹಾಗೂ ಉಪನ್ಯಾಸಕರಾದ ಮಹೇಶ್,ಲೋಕೇಶ್,ಶ್ಯಾಮ್, ಭಾನುಪ್ರಶಾಂತ್ ಮತ್ತಿತರರು ಹಾಜರಿದ್ದರು.

## ಛೇಂಬರ್ ಆಫ್ ಕಾರ್ಮಸ್ ಸಭಾಂಗಣದಲ್ಲಿ ಸಂವಿಧಾನ ಸನ್ಮಾನ ಅಭಿಯಾನ ಇಂದು

» ಚಳ್ಳಕೆರೆ

ಸಂವಿಧಾನ ಸನ್ಮಾನ ಅಭಿಯಾನ ಕಾರ್ಯಕ್ರಮ ನಗರದ ಛೇಂಬರ್ ಆಫ್ ಕಾರ್ಮಸ್ ಸಭಾಂಗಣದಲ್ಲಿ ಡಿ.30ರ ಸೋಮವಾರ ಬೆಳಗ್ಗೆ 10.30ಕ್ಕೆ ನಡೆಯಲಿದ್ದು, ಎಸ್ಟಿ, ಎಸ್ಸಿ ಜನಾಂಗವೂ ಸೇರಿದಂತೆ ಸಮಾಜದ ಎಲ್ಲಾ ದುರೀಣರು ಸಂವಾದ ಕಾರ್ಯಕ್ರಮದಲ್ಲಿ ತಪ್ಪದೆ ಭಾಗವಹಿಸುವಂತೆ ಜಿಲ್ಲಾ ಸಂಚಾಲಕ ಜಿ.ಎಚ್.ಮೋಹನ್ ತಿಳಿಸಿದ್ದಾರೆ.

ಅವರು, ಪತ್ರಿಕೆಗೆ ಮಾಹಿತಿ ನೀಡಿ, ತಾಲ್ಲೂಕಿನ ಎಲ್ಲಾ ದಲಿತಪರ ಸಂಘಟನೆಗಳ ನೇತಾರರು, ಮುಖಂಡರು, ಕಾರ್ಯಕರ್ತರು, ಸಂವಿಧಾನ ಬಗ್ಗೆ ಹೆಚ್ಚು ಮಾಹಿತಿಯನ್ನು ಪಡೆಯಲು ಸಮಾಜದ ಎಲ್ಲಾ ವರ್ಗದ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ. ಸಂವಿಧಾನ ತಜ್ಞ, ಮಾಜಿ ಶಾಸಕರು, ಎನ್. ಮಹೇಶ್, ಮೈಸೂರಿನ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷ ಎಸ್. ಅರುಣ್‌ಕುಮಾರ್, ವಿಚಾರವಾದಿ ವಾದಿರಾಜ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾರ್ಗದರ್ಶನ ನೀಡುವರು. ಸಂವಾದ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸುವಂತೆ ಬಾಳೆಮಂಡಿರಾಮದಾಸ್, ಸೂರನಹಳ್ಳಿಶ್ರೀನಿವಾಸ್, ಡಿ.ದಯಾನಂದ, ವೀರಭದ್ರಪ್ಪ, ರಾಜಣ್ಣ ಮುಂತಾದವರು ಮನವಿ ಮಾಡಿದ್ದಾರೆ.

## ಸಚಿವ ಪ್ರಿಯಾಂಕ ಖರ್ಗೆ ರಾಜಿನಾಮೆಗೆ ಬಿಜೆಪಿ ಜಿಲ್ಲಾಧ್ಯಕ್ಷ ಆಗ್ರಹ

» ಚಿತ್ರದುರ್ಗ

ಸಚಿವ ಪ್ರಿಯಾಂಕ ಖರ್ಗೆಯವರ ಹಿಂಬಾಲಕರೆ ಪಟಾಲಂ ನಿಂದಾ ಕೊಲೆ ಬೆದರಿಕೆಯಿಂದ ಸಚಿನ ಪಾಂಚಾಳ ಗುತ್ತಿಗೆದ್ದಾರ ಸಚಿನ್ ಪಾಂಚಾಲ ಆತ್ಮ ಹತ್ಯೆ.ಮಾಡಿಕೊಂಡಿದ್ದು ಡೆತ್ ನೋಟ್ಸ್ ನಿಂದಾ ಸಾಬೀತಾಗಿದ್ದು ಕೂಡಲೇ ಸಚಿವ ಪ್ರಿಯಾಂಕ ಖರ್ಗೆ ರಾಜಿನಾಮೆ ಕೊಡಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ ಆಗ್ರಹಿಸಿದ್ದಾರೆ. ಈ ಬಗ್ಗೆ ಪತ್ರಿಕೆ ಹೇಳಿಕೆ ನೀಡಿರುವ ಅವರು, ಇಂದು ರಾಜ್ಯದಲ್ಲಿ ಪ್ರತಿದಿನ ಗೂಂಡಗಳ ಹಾವಳಿ ಹೆಚ್ಚಾಗುತ್ತಿದ್ದು ಸರ್ಕಾರ ಇದ್ದನ್ನು ಗಂಭೀರವಾಗಿ ಪರಿಗಣಿಸದೆ ಸರಕಾರದಲ್ಲಿರುವ ಸಚಿವರು ತಮ್ಮ ಹಿಂಬಾಲಕರ ಮೂಲಕ ಕರ್ನಾಟಕವನ್ನು ಗೂಂಡಾ ರಾಜ್ ಮಾಡುತ್ತಿದ್ದಾರೆ. ಇದಕ್ಕೆ ಜ್ವಲಂತ ಸಾಕ್ಷಿ ಎಂದರೆ ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಮಾಜಿ ಸಚಿವರು ಹಾಲಿ ವಿಧಾನಪರಿಷತ್ತಿನ ಸದಸ್ಯರಾದ ಸಿ ಟಿ ರವಿರವರ ಮೇಲೆ ಹಲ್ಲೆ ನಡೆಸಿ ಅವರನ್ನು ಕೆಟ್ಟದ್ದಾಗಿ ನಡೆಸಿಕೊಂಡಿರುವುದು ಮತ್ತು ಹಾಲಿ ಶಾಸಕರಾದ ಮುನಿರತ್ನ ಇವರ ಮೇಲೆ ಮೊಟ್ಟೆಯನ್ನು ಎಸೆದು ಅವರ ಮೇಲೆ ಹಲ್ಲೆ ಮಾಡಲು ಯತ್ನಿಸಿ ಅವರ ಮೇಲೆ ಇಲ್ಲದ ಸುಳ್ಳು ಕೇಸನ್ನು ಹಾಕಿಸಿ ಸರ್ಕಾರ ತಮ್ಮ ಹಿಂಬಾಲಕರಿಂದ ಗೂಂಡಗಿರಿ ಮಾಡಿಸುತ್ತ ಶಾಸಕರನ್ನು ಹೆದರಿಸುತ್ತಿರುವುದನ್ನು ಜಿಲ್ಲಾ ಭಾಜಪ ಉಗ್ರವಾಗಿ ಖಂಡಿಸುತ್ತದೆ.

# ರೆಡ್ಡಿ ಜನಸಂಘದಿಂದ ವಸತಿ ಶಾಲೆ ನಿರ್ಮಾಣ

» ಚಿತ್ರದುರ್ಗ

ಸಮಾಜದ ಮಕ್ಕಳ ಶಿಕ್ಷಣಕ್ಕಾಗಿ ಸ್ಥಾಪನೆಯಾದ ರೆಡ್ಡಿ ಜನಸಂಘ ಮುಂದಿನ ದಿನಮಾನದಲ್ಲಿ ಎಲ್.ಕೆ.ಜಿಯಿಂದ ಪಿಯುವರೆಗೂ ವಸತಿಯುತ ಶಾಲೆಯನ್ನು ನಿರ್ಮಾಣ ಮಾಡಲು ತೀರ್ಮಾನ ಮಾಡಿದೆ ಎಂದು ಚಿತ್ರದುರ್ಗ ಜಿಲ್ಲಾ ರೆಡ್ಡಿ ಜನಸಂಘದ ಅಧ್ಯಕ್ಷರು, ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ ತಿಳಿಸಿದರು.

ಚಿತ್ರದುರ್ಗ ನಗರದ ತುರುವನೂರು ರಸ್ತೆಯಲ್ಲಿನ ಕಮ್ಮರೆಡ್ಡಿ ಸಮುದಾಯ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 2023-24ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಮಹಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ರೆಡ್ಡಿ ಜನಸಂಘವನ್ನು ಸ್ಥಾಪನೆ ಮಾಡಿ ಬೆಳಸಲು ಹಲವಾರುಜನಮಹಾನೀಯರುಶ್ರಮವನ್ನು ಹಾಕಿದ್ದಾರೆ 1905ರ ಇಸವಿಯನ್ನು ನಮ್ಮ ಸಮುದಾಯದ ಮಕ್ಕಳು ಜಿಲ್ಲಾ ಕೇಂದ್ರಕ್ಕೆ ಬಂದು ಶಿಕ್ಷಣವನ್ನು ಪಡೆಯುವುದ ಅಸಾಧ್ಯವಾಗಿತ್ತು ಇಲ್ಲಿ ಸರಿಯಾದ ಜಾಗ ಇಲ್ಲದೆ ಶಿಕ್ಷಣವನ್ನು ಪಡೆಯಲು ಶ್ರಮವನ್ನು ಪಡಬೇಕಾಗಿತ್ತು ಈ ಸಮಯದಲ್ಲಿ ನಮ್ಮ ಹಿರಿಯರು ಸೇರಿ ಹಣವನ್ನು ಸಂಗ್ರಹ ಮಾಡಿ ಚಿತ್ರದುರ್ಗದಲ್ಲಿ ಜಾಗವನ್ನು ಖರೀದಿ ಮಾಡಿ ವಸತಿ ನಿಲಯವನ್ನು ಪ್ರಾರಂಭಿಸಿದರು, ತದ ನಂತರ ಇದನ್ನು ಮುಂದುವರೆಸಿಕೊಂಡು ಬಂದ ನಮ್ಮ ಹಿರಿಯರು ಹಾಗೂ ಬೇರೆಯವರು ಮಕ್ಕಳ ಶಿಕ್ಷಣಕ್ಕಾಗಿ ವಸತಿ ನಿಲಯವನ್ನು ನಡೆಸಿದರು ಎಂದರು.

ಅಂದು ನಮ್ಮ ಹಿರಿಯರು ಮಾಡಿದ ಆಸ್ತಿ ಇಂದು ನಮ್ಮನ್ನು ಕಾಪಾಡಿದೆ. ರೆಡ್ಡಿ ಜನ ಸಂಘ ಇಂದು ಆರ್ಥಿಕವಾಗಿ



ಸಧೃಡವಾಗಿದೆ ಎಂದರೆ ಅದಕ್ಕೆ ನಮ್ಮ ಹಿರಿಯರು ಮಾಡಿದ ಅಸ್ತಿ ಕಾರಣವಾಗಿದೆ, ಇದರಿಂದ ನಮ್ಮ ಸಂಘದ ಆಶ್ರಯದಲ್ಲಿ ವಿವಿಧರೀತಿಯಮಕ್ಕಳಿಗೆಉಪಯುಕ್ತವಾದ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ.

ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದ ಮಕ್ಕಳಿಗೆ ಪುರಸ್ಕಾರ ಮಾಡುವುದರ ಮೂಲಕ ಅವರನ್ನು ಪ್ರೋತ್ಸಾಹ ಮಾಡಲಾಗುತ್ತಿದೆ. ಎಂದ ಅವರು, ನಮ್ಮ ಸಮುದಾಯ ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ನೀಡಬೇಕೆಂದು ನಮ್ಮ ಕಾರ್ಯಕಾರಿ ಸಮಿತಿಯಲ್ಲಿ ತಿರ್ಮಾನ ಮಾಡಿ ಇದಕ್ಕಾಗಿ ಚಳ್ಳಕೆರೆ ತಾಲ್ಲೂಕಿನಲ್ಲಿ ಸುಮಾರು 10 ಎಕರೆ ಜಾಗವನ್ನು ನೋಡಿದ್ದು, ಅದನ್ನು ಖರೀದಿ ಮಾಡುವುದರ ಮೂಲಕ ಮುಂದಿನ ದಿನದಲ್ಲಿ ಇಲ್ಲಿ ಸುಸಜ್ಜಿತವಾದ ಶಾಲೆಯನ್ನು ನಿರ್ಮಾಣ ಮಾಡಲಾಗುವುದು

ಇದಕ್ಕೆ ಬೇಕಾದ ತಯಾರಿಯು ಸಹಾ ನಡೆಯುತ್ತಿದೆ ಇಲ್ಲಿ ಎಲ್.ಕೆ.ಜಿಯಿಂದ ಹಿಡಿದರು ಪಿಯುವರೆಗೂ ವಸತಿಯುತ ಶಿಕ್ಷಣವನ್ನು ನೀಡಲು ತೀರ್ಮಾನ ಮಾಡಲಾಗಿದೆ ಎಂದು ತಿಪ್ಪಾರೆಡ್ಡಿ ತಿಳಿಸಿದರು.

ನಮ್ಮ ರೆಡ್ಡಿ ಜನ ಸಂಘ ಬೆಳೆಯಲು ಕಾರಣರಾದವರು ಹಾಗೂ ನಮ್ಮಲ್ಲಿ ರೂಂಗಳನ್ನು ನಿರ್ಮಾಣ ಮಾಡಲು ಸಹಾಯ ಮಾಡಿದವರ ಭಾವಚಿತ್ರವನ್ನು ಹಾಕಲು ತೀರ್ಮಾನ ಮಾಡಲಾಗಿದೆ. ದಾವಣಗೆರೆಯಲ್ಲಿನ ನಮ್ಮ ಆಸ್ತಿಯಲ್ಲಿ ಹಳೆಯದಾದ ಕಟ್ಟಡ ಇತ್ತು ಅದನ್ನು ಕೆಡವಿ ಹೊಸದಾದ ಕಟ್ಟಡವನ್ನು ಸುಮಾರು 8 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲು ನಿರ್ಧಾರ ಮಾಡಲಾಗಿದೆ. ನಮ್ಮ ಸಂಘದ ಆಸ್ತಿಗಳಿಂದ ತಿಂಗಳು ವರಮಾನ ಬರಲಿದೆ. ಇದರಿಂದ ಸಮುದಾಯದ ಪ್ರವತಿಗಾಗಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ನಮ್ಮ ಸಮುದಾಯ ಮಕ್ಕಳು ಸಹಾ ಐಪಿಎಸ್. ಐಎಎಸ್, ಕೆಎಎಸ್ ಮಾಡಲು ಬೇಕಾದ ತರಬೇತಿಯನ್ನು ನೀಡಲು ಸಹಾ ನಮ್ಮ ಸಂಘ ತಯಾರಿದೆ ಇದಕ್ಕೆ ಅಗತ್ಯವಾಗಿ ಬೇಕಾದ ಸಂಪನ್ಮೂಲವನ್ನು ನೀಡಲು ಸಂಘ ತಯಾರಿದೆ ಎಂದರು.

ಸಂಘದ ಕಾರ್ಯದರ್ಶಿ ಶ್ರೀಮತಿ ಶೀಲ ಮಾತನಾಡಿ, ಸಂಘದ ಅಭೀವೃದ್ದಿಗಾಗಿ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ, ಜಗಳೂರು ಹಾಸ್ಟಲ್ ಕಟ್ಟಡದ ನವೀಕರಣ ಹೊಸದಾಗಿ 4 ರೂಂಗಳನ್ನು ನಿರ್ಮಾಣ ಮಾಡಲಾಗಿದೆ. ಚಿತ್ರದುರ್ಗದಲ್ಲಿ ಈ ಸಮುದಾಯ ಭವನದಲ್ಲಿ ವರ್ಷದಲ್ಲಿ 87 ಮದುವೆಗಳು ನಡೆದಿವೆ. ನಮ್ಮ ಹಿರಿಯರು ಸ್ಥಾಪನೆ ಮಾಡಿದ ಸಂಘ ಉತ್ತಮವಾಗಿ ಸದೃಢವಾಗಿದೆ ಇದೆ. ಬೇರೆ ಸಮಾಜಕ್ಕೆ ಹೋಲಿಸಿದರೆ ನಮ್ಮ ಸಮಾಜ ಉತ್ತಮವಾಗಿ ಇದೆ ಎಂದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಪರಶುರಾಮ್, ಖಂಜಾಚಿ ಸುರೇಶ್ ಕುಮಾರ್, ಸದಸ್ಯರುಗಳಾದ ರಾಮಕೃಷ್ಣ, ಮಂಜುನಾಥ್, ಸುದರ್ಶನ ರೆಡ್ಡಿ, ವೇಣುಗೋಪಾಲ್,ರಾಘವರೆಡ್ಡಿ,ತಿಪ್ಪಾರೆಡ್ಡಿ, ನಾಗರಾಜ್, ಚಂದ್ರರೆಡ್ಡಿ,ಮಾರುತೇಶ್ ರೆಡ್ಡಿ, ಹರೀಶ್, ಶ್ರೀಮತಿ ರೂಪ, ಶ್ರೀಮತಿ ಸುಜಾತ, ಶ್ರೀಮತಿ ಸುಮನ್, ಶ್ರೀಮತಿ ರೇಖಾ ಹಾಗೂ ಶ್ರೀಮತಿ ಇಂದಿರಮ್ಮ ಭಾಗವಹಿಸಿದ್ದರು.

ಚಿತ್ರದುರ್ಗ ಜಿಲ್ಲಾ ರೆಡ್ಡಿ ಜನಸಂಘದ ಉಪಾಧ್ಯಕ್ಷರಾದ ಎಂ.ಕೆ.ಆನಂತರೆಡ್ಡಿ ಸ್ವಾಗತಿಸಿದರು. ಜಯಶೀಲರೆಡ್ಡಿ ಕಳೆದ ಒಂದು ವರ್ಷದಲ್ಲಿ ನಿಧನರಾದವರ ಹೆಸರನ್ನು ಓದಿ ಶ್ರದ್ದಾಂಜಲಿಯನ್ನು ಅರ್ಪಿಸಲಾಯಿತು. ತಿಮ್ಮಾರೆಡ್ಡಿ ಕಾರ್ಯಕ್ರಮವನ್ನು ನಿರೂಪಿಸಿದರು. ಅಂಜನಾ ನೃತ್ಯ ಕಲಾ ಕೇಂದ್ರ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

# ಅಭಿವೃದ್ಧಿಯ ಬಗ್ಗೆ ವಿಚಾರಮಂಥನ ಮೂಡಿಸುವ ಕಾರ್ಯಕ್ರಮ ಧಗ್ರಾ ನಿರಂತರವಾಗಿ ಮಾಡುತ್ತಿದೆ

» ಹೊಸದುರ್ಗ

ಮಹಿಳಾ ಜಾಗೃತಿ, ಮದ್ಯವರ್ಜನ ಶಿಬಿರ, ಕೆರೆ ಅಭಿವೃದ್ಧಿಯಂತಹ ಕೆಲಸಗಳು ಮತ್ತು ಮಹಿಳೆಯ ಸರ್ವಾಂಗಿನ ಅಭಿವೃದ್ಧಿಯ ಬಗ್ಗೆ ವಿಚಾರಮಂಥನ ಮೂಡಿಸುವ ಕಾರ್ಯಕ್ರಮವನ್ನು ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ನಿರಂತರವಾಗಿ ಮಾಡುತ್ತಿದೆ. ಅನಾಥರುದ್ದ ಮಹಿಳೆಯರಿಗಾಗಿ ವಾತ್ಸಲ್ಯ ಗೃಹ ನಿರ್ಮಾಣವನ್ನು ಧರ್ಮಸ್ಥಳ ಸಂಸ್ಥೆ ಮಾಡುತ್ತಿದೆ ಎಂದು ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಮಾಜಿ ಜಿ ಪಂ,ಸದಸ್ಯ ಡಿ ಪರುಶುರಾಮಪ್ಪ ತಿಳಿಸಿದರು




ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟ ಹಾಗೂ ಕೆರೆ ಅಭಿವೃದ್ಧಿ ಸಮಿತಿ ಇವರಿಂದ ತಾಲೂಕಿನ ಕಂಚಿಪುರದಲ್ಲಿ ನಡೆದ ಸಾಮೂಹಿಕ ಶ್ರೀ ಮಹಾಲಕ್ಷ್ಮಿ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಅಭಿವೃದ್ಧಿ ಪಡಿಸಿದ ಕೆರೆಯನ್ನು ಗ್ರಾಮ ಪಂಚಾಯಿತಿಯವರು ಹಾಗೂ ಗ್ರಾಮಸ್ಥರು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಸಾರ್ವಜನಿಕರು ಕೆರೆಗೆ ಕಸಕಡ್ಡಿ ಹಾಕಬಾರದು, ಧರ್ಮಸ್ಥಳ ಸಂಸ್ಥೆಯ ವತಿಯಿಂದ ಮದ್ಯವರ್ಜನ ಶಿಬಿರಗಳನ್ನು ನಡೆಸಿ ಮದ್ಯ ಹಾಗೂ ಮಾದಕ ವಸ್ತುಗಳ ಹೆಸರನ್ನು ಮುಕ್ತ ಸಮಾಜಕ್ಕಾಗಿ ಧರ್ಮಸ್ಥಳ ಸಂಸ್ಥೆ ಸೇವೆ ಮಾಡುತ್ತಿದೆ. ನಮ್ಮ ಊರಿನಲ್ಲಿ ಮದ್ಯವದ್ಯನ ಶಿಬಿರ ಮಾಡಬೇಕು ಎಂದು ಮನವಿ ಮಾಡಿದರು.

ಸಮಾಜ ಸೇವಕ ಆಗ್ರೋ ಶಿವಣ್ಣ ಮಾತನಾಡಿ ಹಣಕಾಸು ನಮ್ಮ ಬದುಕಿನ ಶಕ್ತಿ, ದೇಶದಲ್ಲಿ ಎಲ್ಲಾ ಬ್ಯಾಂಕುಗಳು ಸಾರ್ವಜನಿಕವಾಗಿ ಕಾರ್ಯನಿರ್ವಹಿಸುತ್ತಿದ್ದರೂ ಆ ಬ್ಯಾಂಕುಗಳು ನಮ್ಮ ಮೇಲೆ ನಂಬಿಕೆ ಇಟ್ಟಿಲ್ಲ ನಮ್ಮ ಆಸ್ತಿಯ ಮೇಲೆ ನಂಬಿಕೆ ಇಟ್ಟಿವೆ, ನಮ್ಮ ಮೇಲೆ ನಂಬಿಕೆ ಇಟ್ಟು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಆರ್ಥಿಕ ಹೊರೆಯನ್ನ ಹೊತ್ತು ಕರ್ನಾಟಕದ ಮಹಿಳೆಯರ ನಂಬಿ ಕಡಿಮೆ ಬಡ್ಡಿ ದರದಲ್ಲಿ ಆರ್ಥಿಕ ಸಹಾಯ ನೀಡುತ್ತಿದೆ ಎಂದರು.

ಯುವ ಮುಖಂಡ ಬಿ,ಜಿ ಅರುಣ್, ಟಿ ಎ ಪಿ ಎಂ ಎಸ್ ಅಧ್ಯಕ್ಷ ಕಾರೇಹಳ್ಳಿ ಬಸವರಾಜ್, ಜಿ ಪಂ, ಕೆ ಡಿ ಪಿ ಸದಸ್ಯೆ ದೀಪಿಕಾ ಸತೀಶ್, ಜಿಲ್ಲಾ ಜನ ಜಾಗೃತಿ ವೇದಿಕೆ ಸದಸ್ಯ ಬೋರೇಶ್, ತುಂಬಿನಕೆರೆ ಬಸವರಾಜ್, ತಿಪ್ಪೇಶ್, ಶಶಿಧರ್, ರಾಜಣ್ಣ, ಸುರೇಶ್,. ಯೋಜನಾಧಿಕಾರಿ ಶಿವಣ್ಣ, ಧರ್ಮಸ್ಥಳ ಮಹಿಳಾ ಸ್ವ ಸಹಾಯ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

## ವಿಜ್ಞಾನದಿಂದ ಮಕ್ಕಳ ಮನಸ್ಸು ವಿಕಾಸ




» ಚಿತ್ರದುರ್ಗ

"ವಿಜ್ಞಾನದಿಂದ ನಮ್ಮ ಜೀವನ ಶೈಲಿಯೇ ಬದಲಾಗಿದೆ. ಇಂತಹ ವಿಜ್ಞಾನ ಮೇಳಗಳಲ್ಲಿ ಭಾಗವಹಿಸುವ ಮೂಲಕ ಅವರ ಮನಸ್ಸು ವಿಕಾಸ ವಾಗುತ್ತದೆ. ಅನೇಕ ವೈಜ್ಞಾನಿಕ ಸಂಶೋಧನೆಗಳು ಸಮಾಜಕ್ಕೆ ಅನುಕೂಲವಾದ ವಾತಾವರಣವನ್ನು ನಿರ್ಮಾಣ ಮಾಡಿವೆ ಎಂದು ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಕಾರ್ಯದರ್ಶಿ ಎಚ್.ಎಸ್.ಟಿ.ಸ್ವಾಮಿ ಅಭಿಪ್ರಾಯಪಟ್ಟರು. ನ್ಯಾಷನಲ್ ಇಂಗ್ಲೀಷ್ ಶಾಲೆಯಲ್ಲಿ ಏರ್ಪಡಿಸಿದ್ದ "ಸೈನ್ಸ್ ಎಕ್ಸ್ ಪೋ" ವಿಜ್ಞಾನ ಹಬ್ಬವನ್ನು ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳು ವಿಜ್ಞಾನ ಮೇಳದಲ್ಲಿ ತಯಾರಿಸಿರುವ ಮಾದರಿಗಳು ಇಷ್ಟಕ್ಕೇ ಸೀಮಿತವಾಗದೇ ಜಿಲ್ಲೆ, ರಾಜ್ಯ, ರಾಷ್ಟ್ರಮಟ್ಟದಲ್ಲಿ ಪ್ರದರ್ಶಿಸುವ ಮೂಲಕ ಅವರ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

ವಿಜ್ಞಾನವನ್ನು ಅಧ್ಯಯನ ಮಾಡಿದವರಿಗೆ ಭವಿಷ್ಯದಲ್ಲಿ ಸಾಕಷ್ಟು ಅವಕಾಶಗಳಿವೆ. ಇಂತಹ ಮಾದರಿಗಳು ಸಮಾಜಕ್ಕೆ ಉತ್ತಮ ಸಂದೇಶ ಸಾರಲಿ ಎಂದರು. ಸಂಸ್ಥೆಯ ಆಡಳಿತಾಧಿಕಾರಿ ಶ್ರೀ ಸೈಯದ್ ಅಕ್ತರ್ ಮಾತನಾಡಿ " ವಿದ್ಯಾರ್ಥಿಗಳಿಗೆ ವಿಜ್ಞಾನಿಗಳ ಸಾಧನೆ ಪರಿಚಯವಾಗಬೇಕು, ವಿಜ್ಞಾನದ ಮೂಲಕ ವಿದ್ಯಾರ್ಥಿಗಳು ಉತ್ತಮ ಫಲಿತಾಂಶವನ್ನು ತರುವ ಮೂಲಕ, ತಮ್ಮ ಛಾಪನ್ನು ಮೂಡಿಸಿ ಶಾಲೆಗೆ , ಶಿಕ್ಷಕರಿಗೆ, ತಂದೆ ತಾಯಿಯರಿಗೆ ಗೌರವ ತರಲಿ" ಎಂದು ತಿಳಿಸಿದರು ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ಸೈಯದ್ ಶುಜತ್, ವ್ಯವಸ್ಥಾಪಕರಾದ ಇಮ್ರಾನ್ ಸೈಫ್, ಪ್ರಾಂಶುಪಾಲೆ ರುಕಿಯಾ ಖಾನಂ, ಉಪ ಪ್ರಾಂಶುಪಾಲರಾದ ಶಹನಾಜ್, ಶಿಕ್ಷಕರಾದ ದಿವ್ಯಾ, ಮೋಹಸೀನಾ, ಸಾಜಿದ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರಮುಖ ಸುದ್ದಿ

# ಮನುಷ್ಯನಿಗೆ ಆಹಾರ ಆರೋಗ್ಯ ಆಧ್ಯಾತ್ಮ ಅವಶ್ಯಕ

» ತುಮಕೂರು

ಮಾನವ ಯಾವಾಗಲೂ ಸುಖಾಪೇಕ್ಷಿ. ಆದರ್ಶ ಮೌಲ್ಯಗಳ ಪರಿಪಾಲನೆಯಿಂದ ಬದುಕು ಉಜ್ವಲಗೊಳ್ಳುತ್ತದೆ. ಪ್ರತಿಯೊಬ್ಬ ವ್ಯಕ್ತಿಗೂ ಆಹಾರ ಆರೋಗ್ಯ ಮತ್ತು ಆಧ್ಯಾತ್ಮ ಅವಶ್ಯಕವಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ನಗರದ ಶ್ರೀ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟಿನ ಆಶ್ರಯದಲ್ಲಿ ಜರುಗಿದ ಜನ ಜಾಗೃತಿ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕೋಟಿ ಹಣ ಇದ್ದರೇನು ಮಾನವೀಯ ಮೌಲ್ಯವಿಲ್ಲದ ಜೀವನ ನಿರರ್ಥಕ. ಜೀವನ ಎಂಬುದು ಕೇವಲ ಹಣದಿಂದ ಸಾಗುವ ದೋಣಿಯಲ್ಲ. ಅದಕ್ಕೆ ಮಾನವೀಯತೆ ಎಂಬ ನಾವಿಕ ಮತ್ತು ದಾನ ಧರ್ಮ ಎಂಬ ಹುಟ್ಟು ಅವಶ್ಯಕ. ಜ್ಞಾನದಿಂದ ಅಧಿಕಾರ ಸಿಗಬಹುದು. ಆದರೆ ಗೌರವ ಸಿಗಬೇಕೆಂದರೆ ವ್ಯಕ್ತಿತ್ವ ಇರಬೇಕು. ಅನುಭವ ಜಗತ್ತಿನ ಶ್ರೇಷ್ಠ ಶಿಕ್ಷಕ.




ಉಸಿರಿರುವವರೆಗೂ ಜ್ಞಾನಾರ್ಜನೆಯೇ ಜೀವನದ ಗುರಿಯಾಗಿರಬೇಕು. ಯಾರು ಎಷ್ಟೇ ತುಳಿದರೂ ಗರಿಕೆ ಕೆಲ ಕ್ಷಣಗಳಲ್ಲಿ ಮೊದಲಿನ ಸ್ಥಿತಿಗೆ ಬರುತ್ತದೆ. ಅದು ಯಾವತ್ತೂ ಬೇಸರಿಸಿಕೊಳ್ಳುವುದಿಲ್ಲ. ಮತ್ತು ಎದ್ದು ನಿಲ್ಲುವುದನ್ನು ಮರೆಯುವುದಿಲ್ಲ. ಮನುಷ್ಯನ ಮನೋಭಾವವು ಗರಿಕೆಯಂತಿರಬೇಕು. ಮೂಕನ ಮಾತು ಬೇಗ ಅರ್ಥ ಮಾಡಿಕೊಳ್ಳಬಹುದು. ಆದರೆ ಮುಖವಾಡ ಧರಿಸಿ ಹಿಂದೆ ಮಾತನಾಡುವವರ ಮಾತುಗಳನ್ನು ಅರ್ಥ ಮಾಡಿಕೊಳ್ಳುವುದು ಕಷ್ಟವಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಉಜ್ವಲ ಬದುಕಿಗೆ ಜೀವನ ದರ್ಶನದ ಅರಿವನ್ನು ಬೋಧಿಸಿ ಸನ್ಮಾರ್ಗಕ್ಕೆ ಕರೆತಂದ ಘಟನೆಗಳನ್ನು ಕಾಣಬಹುದು. ತುಮಕೂರು ನಗರದಲ್ಲಿ ಹಮ್ಮಿಕೊಂಡ ಧನುರ್ಮಾಸದ ಪೂಜಾ ಹಾಗೂ ಸಮಾರಂಭಗಳು ತಮಗೆ ತೃಪ್ತಿ ತಂದಿವೆ ಎಂದು ನುಡಿದು ಇದಕ್ಕಾಗಿ ಶ್ರಮಿಸಿದ ಎಲ್ಲ ಸಂಘಟಕರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯಾಧ್ಯಕ್ಷರಾದ ಶಂಕರ ಬಿದರಿಯವರು ಮಾತನಾಡಿ ವೀರಶೈವ ಧರ್ಮದ ಸಂಸ್ಕೃತಿ ಬೆಳೆದುಕೊಂಡ ಬಂದ ಪರಂಪರೆ ಅಪೂರ್ವ. ಆಚಾರ್ಯರ ಮತ್ತು ಶರಣರ ಪರಿಶ್ರಮದಿಂದಾಗಿ ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸುತ್ತಾ ಬಂದಿದೆ. ವೀರಶೈವ ಧರ್ಮದಲ್ಲಿ ನೂರಾರು ಒಳಪಂಗಡ ಭೇದ ಭಾವನೆಯಿಂದಾಗಿ ಸಂಘಟನೆ ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲ. ಒಳ ಪಂಗಡ ಮರೆತು ಎಲ್ಲರೂ ಒಗ್ಗಟ್ಟಿನಿಂದ ಬಾಳುವ ಅವಶ್ಯಕತೆ ಇದೆಯೆಂದರು. ಮಾಜಿ ಸಚಿವ ಸೊಗಡು ಶಿವಣ್ಣ, ಎ.ಎಸ್.ಸೋಮಶೇಖರ, ಬಿ.ಎಸ್. ಮಂಜುನಾಥ, ಗಂಗಾಧರ ಶಾಸ್ತ್ರಿಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಎಸ್.ಶ್ರೀಧರ, ಡಿ.ಎಂ.ರಾಜಶೇಖರ್, ಸಿದ್ಧಪ್ಪ, ರೇಣುಕಾ ಪರಮೇಶ್, ರಾಜೇಶ್ವರಿ ರುದ್ರಪ್ಪ, ನಳಿನಾ ಶಿವಾನಂದ ಮೊದಲಾದ ಗಣ್ಯರು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಚಿಂತಕ ಪ್ರಶಾಂತ ರಿಪ್ಪನ್‌ಪೇಟೆ ಅವರು "ಶ್ರೀ ಜಗದ್ಗುರು ಪಂಚಾಚಾರ್ಯ ಪಂಚಸೂತ್ರ" ಕುರಿತು ಸುದೀರ್ಘ ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಶ್ರೀ ರಂಭಾಪುರಿ- ಶ್ರೀ ಕೇದಾರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಈಚನೂರ ಗ್ರಾಮದಲ್ಲಿ ಫೆಬ್ರುವರಿ ತಿಂಗಳಲ್ಲಿ ಜರುಗುವ ಸಮಾರಂಭದ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಲಾಯಿತು.

ದೊಡ್ಡಗುಣಿ ಹಿರೇಮಠದ ರೇವಣಸಿದ್ಧೇಶ್ವರಶಿವಾಚಾರ್ಯಸ್ವಾಮಿಗಳು ಉಪದೇಶಾಮೃತವನ್ನಿತ್ತರು. ಅಂಕನಹಳ್ಳಿ ಗವಿಮಠದ ಶಿವರುದ್ರ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು. ನೇತೃತ್ವ ವಹಿಸಿದ ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮ ಸಂಸ್ಕೃತಿ ಗುರು ಪರಂಪರೆಯ ಮಹತ್ವ ವಿಚಾರಗಳನ್ನು ಪ್ರಸ್ತಾಪಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T